ಕರ್ನಾಟಕ ವಿಧಾನ ಪರಿಷತ್ತು

# ನೂರ ಐವತ್ತ ಮೂರನೆಯ ಅಧಿವೇಶನದ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 15.07.2024 ರಿಂದ
25.07.2024ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ
ವಿಧಾನ ಸೌಧ, ಬೆಂಗಳೂರು-560 001

# ನೂರ ಐವತ್ತ ಮೂರನೆಯ ಅಧಿವೇಶನದ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 15.07.2024 ರಿಂದ
25.07.2024ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ
ವಿಧಾನ ಸೌಧ, ಬೆಂಗಳೂರು–560 001

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:15.07.2024**

**(01)**

ದಿನಾಂಕ:15.07.2024 ರಂದು ಬೆಳಿಗ್ಗೆ 11.15 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**'ವಂದೇ ಮಾತರಂ'** ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿಧ್ಯುಕ್ತವಾಗಿ ಆರಂಭಗೊಂಡಿತು.

**ಭಾರತದ ಸಂವಿಧಾನ**

**ಪೀಠಿಕೆ**

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

## 1. ಪ್ರಕಟಣೆ

1. ಸನ್ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:12.07.2024ರ ತಮ್ಮ ಪತ್ರದಲ್ಲಿ ತಿಳಿಸಿರುವ ರೀತ್ಯಾ, ಕರ್ನಾಟಕ ವಿಧಾನ ಪರಿಷ್ತತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 2(1)ರ ಪ್ರಕಾರ **ಶ್ರೀ ಎನ್.ಎಸ್. ಬೋಸ್‌ರಾಜು,** ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರನ್ನು ವಿಧಾನ ಪರಿಷತ್ತಿನ ಸಭಾನಾಯಕರನ್ನಾಗಿ ದಿನಾಂಕ:12.07.2024ರಿಂದ ಜಾರಿಗೆ ಬರುವಂತೆ ನಾಮನಿರ್ದೇಶನ ಮಾಡಿರುತ್ತಾರೆಂಬ ವಿಷಯವನ್ನು ಸದನದ ಗಮನಕ್ಕೆ ತರಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

## 2. ಸಂತಾಪ ಸೂಚನೆಗಳು

ಕಳೆದ ಅಧಿವೇಶನದಿಂದೀಚೆಗೆ ನಿಧನ ಹೊಂದಿದ ಈ ಕೆಳಕಂಡ ಗಣ್ಯರುಗಳಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

ಶ್ರೀಮತಿ/ಶ್ರೀಯುತರುಗಳಾದ:

01. ಪಾಟೀಲ ಸುನಂದಾ ನಿಂಗನಗೌಡ, ವಿಧಾನ ಪರಿಷತ್ತಿನ ಮಾಜಿ ಶಾಸಕರು
02. ಟಿ.ಕೆ. ಚಿನ್ನಸ್ವಾಮಿ, ವಿಧಾನ ಪರಿಷತ್ತಿನ ಮಾಜಿ ಶಾಸಕರು
03. ಇಕ್ಬಾಲ್ ಅಹಮದ್ ಸರಡಗಿ, ಮಾಜಿ ಸಂಸದರು, ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಮಾಜಿ ಶಾಸಕರು
04. ಎಂ.ಬಿ. ಭಾನುಪ್ರಕಾಶ್, ವಿಧಾನ ಪರಿಷತ್ತಿನ ಮಾಜಿ ಶಾಸಕರು
05. ನಾಗಮ್ಮ ಕೇಶವಮೂರ್ತಿ, ಮಾಜಿ ಸಚಿವೆ ಹಾಗೂ ವಿಧಾನ ಸಭೆಯ ಮಾಜಿ ಉಪಾಧ್ಯಕ್ಷರು
06. ವಿ. ಶ್ರೀನಿವಾಸ ಪ್ರಸಾದ್, ಲೋಕಸಭೆಯ ಮಾಜಿ ಸಂಸದರು ಹಾಗೂ ವಿಧಾನ ಸಭೆಯ ಮಾಜಿ ಶಾಸಕರು
07. ಎಂ.ಪಿ. ಕೇಶವಮೂರ್ತಿ, ಮಾಜಿ ಸಚಿವರು ಹಾಗೂ ವಿಧಾನ ಸಭೆಯ ಮಾಜಿ ಶಾಸಕರು
08. ಗಿಡಿಗೆರೆ ರಾಮಕ್ಕ, ಕಟೀಲು ದೇವಳದ ಪಾಡ್ದನ ಕಲಾವಿದೆ
09. ದ್ವಾರಕೀಶ್, ಕನ್ನಡ ಚಲನಚಿತ್ರ ರಂಗದ ಹಿರಿಯ ನಟ, ನಿರ್ದೇಶಕ ಮತ್ತು ನಿರ್ಮಾಪಕ
10. ಸುಬ್ರಹ್ಮಣ್ಯ ಧಾರೇಶ್ವರ, ಬಡಗು ತಿಟ್ಟು ಯಕ್ಷಗಾನದ ಖ್ಯಾತ ಭಾಗವತ

11. ಪೇತ್ರಿ ಮಾಧವ ನಾಯ್ಕ್, ಬಡಗು ತಿಟ್ಟು ಹಿರಿಯ ಯಕ್ಷಗಾನ ಕಲಾವಿದ

12. ರಾಜೀವ್ ತಾರಾನಾಥ, ಖ್ಯಾತ ಸರೋದ್ ವಾದಕರು

13. ಡಾ: ನಟೇಶ್ ರತ್ನ, ಹಿರಿಯ ರಂಗಕರ್ಮಿ

14. ಕಮಲಾ ಹಂಪನಾ, ಹಿರಿಯ ಕನ್ನಡದ ಮಹಿಳಾ ಲೇಖಕಿ, ವಿದ್ವಾಂಸರು ಹಾಗೂ ಪ್ರಾಧ್ಯಾಪಕರು

15. ಅಪರ್ಣಾ, ಕನ್ನಡದ ಖ್ಯಾತ ನಿರೂಪಕಿ

ಮಾನ್ಯ ಸಭಾನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀ ಶಶೀಲ್ ಜಿ. ನಮೋಶಿ ಅವರು ಸಂತಾಪ ಸೂಚನಾ ನಿರ್ಣಯಕ್ಕೆ ಸಹಮತಿಯನ್ನು ವ್ಯಕ್ತಪಡಿಸಿ ಮಾತನಾಡಿದರು.

ಮೃತರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಅವರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

## ಪ್ರಕಟಣೆ

2. ಜನತಾದಳ(ಜಾತ್ಯತೀತ) ಅಧ್ಯಕ್ಷರು ದಿನಾಂಕ:14.07.2024ರ ತಮ್ಮ ಪತ್ರದಲ್ಲಿ ತಿಳಿಸಿರುವ ರೀತ್ಯಾ, ಶ್ರೀ ಎಸ್.ಎಲ್. ಭೋಜೇಗೌಡ ಅವರನ್ನು ವಿಧಾನ ಪರಿಷತ್ತಿನಲ್ಲಿ ಜನತಾದಳ(ಜಾತ್ಯಾತೀತ) ಪಕ್ಷದ ನಾಯಕರಾಗಿ ದಿನಾಂಕ:15.07.2024ರಿಂದ ಜಾರಿಗೆ ಬರುವಂತೆ ನಾಮನಿರ್ದೇಶನ ಮಾಡಿರುತ್ತಾರೆಂಬ ವಿಷಯವನ್ನು ಸದನದ ಗಮನಕ್ಕೆ ತರಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

## 3. ನೂತನ ಶಾಸಕರುಗಳ ಪರಿಚಯ

ವಿಧಾನ ಸಭಾ ಕ್ಷೇತ್ರದಿಂದ, ಶಿಕ್ಷಕರ ಕ್ಷೇತ್ರದಿಂದ ಹಾಗೂ ಪದವೀಧರರ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ನೂತನವಾಗಿ ಚುನಾಯಿತರಾದ ಈ ಕೆಳಕಂಡ ಮಾನ್ಯ ಶಾಸಕರುಗಳನ್ನು ಮಾನ್ಯ ಸಭಾನಾಯಕರು ಪರಿಚಯಿಸಿದರು.

ಶ್ರೀಯುತರುಗಳಾದ:

| | | |
|---|---|---|
| 1. | ಡಾ: ಕೆ. ಗೋವಿಂದರಾಜ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 2. | ಐವನ್ ಡಿ'ಸೋಜಾ | ವಿಧಾನ ಸಭೆಯಿಂದ ಚುನಾಯಿತರಾದವರು |
| 3. | ಎನ್. ರವಿಕುಮಾರ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 4. | ಎಸ್.ಎಲ್. ಭೋಜೇಗೌಡ | ಶಿಕ್ಷಕರ ಕ್ಷೇತ್ರ |
| 5. | ಡಾ: ಚಂದ್ರಶೇಖರ ಬಸವರಾಜ ಪಾಟೀಲ | ಪದವೀಧರರ ಕ್ಷೇತ್ರ |
| 6. | ಸಿ.ಟಿ. ರವಿ | ವಿಧಾನ ಸಭೆಯಿಂದ ಚುನಾಯಿತರಾದವರು |
| 7. | ಡಾ: ಯತೀಂದ್ರ ಎಸ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 8. | ಜಗದೇವ್ ಗುತ್ತೇದಾರ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 9. | ಟಿ.ಎನ್. ಜವರಾಯಿ ಗೌಡ | ವಿಧಾನ ಸಭೆಯಿಂದ ಚುನಾಯಿತರಾದವರು |
| 10. | ಬಲ್ಕೀಸ್ ಬಾನು | ವಿಧಾನ ಸಭೆಯಿಂದ ಚುನಾಯಿತರಾದವರು |
| 11. | ಮುಳೆ ಮಾರುತಿರಾವ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 12. | ಎ. ವಸಂತ ಕುಮಾರ್ | ವಿಧಾನ ಸಭೆಯಿಂದ ಚುನಾಯಿತರಾದವರು |
| 13. | ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) | ಶಿಕ್ಷಕರ ಕ್ಷೇತ್ರ |
| 14. | ಕೆ. ವಿವೇಕಾನಂದ | ಶಿಕ್ಷಕರ ಕ್ಷೇತ್ರ |
| 15. | ರಾಮೋಜಿಗೌಡ | ಪದವೀಧರರ ಕ್ಷೇತ್ರ |

16. ಡಾ: ಧನಂಜಯ ಸರ್ಜಿ ಪದವೀಧರರ ಕ್ಷೇತ್ರ

17. ಬಸನಗೌಡ ಬಾದರ್ಲಿ ವಿಧಾನ ಸಭೆಯಿಂದ ಚುನಾಯಿತರಾದವರು

## 4. ಪ್ರಶ್ನೋತ್ತರ

ದಿನಾಂಕ:15.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 1ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 1 (136)
2. 2(48)
3. 3(120) ತಡೆಹಿಡಿಯಲಾಯಿತು
4. 4(54)
5. 5(94) ವರ್ಗಾವಣೆ
6. 6(21)
7. 7(111)
8. 8(51) ಡಾ: ಧನಂಜಯ ಸರ್ಜಿ ಅವರ ಪರವಾಗಿ ಶ್ರೀ ಡಿ.ಎಸ್. ಅರುಣ್
9. 9(61)
10. 10(31)
11. 11(12+19)

ಮಧ್ಯಾಹ್ನ 1.22 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

12. 12(129)
13. 13(148)

14. 14(70)

15. 15(04)

ದಿನಾಂಕ:15.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 1ನೇ ಪಟ್ಟಿಯ ಒಟ್ಟು 133 ಪ್ರಶ್ನೆಗಳ ಪೈಕಿ 32 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**5. ಸಭೆಯ ಮುಂದಿಡಲಾಗುವ ಕಾಗದ ಪತ್ರ**

ಮಾನ್ಯ ಸಭಾನಾಯಕರು ಹಾಗೂ ಸಂಬಂಧಪಟ್ಟ ಸಚಿವರು ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಒಂದನೇ ಮತ್ತು ಎರಡನೇ ಪಟ್ಟಿಯನ್ನು ಸದನದಲ್ಲಿ ಮಂಡಿಸಿದರು.

**6. ಕಾರ್ಯದರ್ಶಿಯವರ ವರದಿ**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 1. | ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ, 2024, (ವಿಧೇಯಕ ಸಂ.1)<br><br>THE KANNADA LANGUAGE COMPREHENSIVE DEVELOPMENT (AMENDMENT) BILL, 2024 (BILL NO.1) | 25.02.2024 | **ರಾಜ್ಯಪಾಲರು** |
| 2. | ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024 (ವಿಧೇಯಕ–12)<br><br>SHREE GHATISUBRAMANYA KSHETRA DEVELOPMENT AUTHORITY BILL, 2024 | 06.03.2024 | **ರಾಜ್ಯಪಾಲರು** |
| 3. | ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024 (ವಿಧೇಯಕ ಸಂ.10)<br><br>SHREE CHAMUNDESHWARI KSHETRA DEVELOPMENT AUTHORITY BILL, 2024 | 06.03.2024 | **ರಾಜ್ಯಪಾಲರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 4. | ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024 (ವಿಧೇಯಕ ಸಂ.13)<br><br>HULIGEMMA DEVI KSHETRA DEVELOPMENT AUTHORITY BILL, 2024 | 06.03.2024 | ರಾಜ್ಯಪಾಲರು |
| 5. | ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ, 2024 (ವಿಧೇಯಕ ಸಂ.09)<br><br>THE KARNATAKA REPEALING OF CERTAIN ENACTMENTS AND REGIONAL LAWS BILL, 2024 | 06.03.2024 | ರಾಜ್ಯಪಾಲರು |
| 6. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.2)<br><br>THE KARNATAKA GRAM SWARAJ AND PANCHAYAT RAJ (AMENDMENT) BILL, 2024 (BILL NO.2) | 08.03.2024 | ರಾಜ್ಯಪಾಲರು |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 7. | ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂಖ್ಯೆ:14)<br>THE KARNATAKA MOTOR VEHICLES TAXATION (AMENDMENT) BILL, 2024 BILL NO.14 | 06.03.2024 | **ರಾಜ್ಯಪಾಲರು** |
| 8. | ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ18)<br>THE KARNATAKA POLICE (AMENDMENT) BILL, 2024 | 06.03.2024 | **ರಾಜ್ಯಪಾಲರು** |
| 9. | ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024 (ವಿಧೇಯಕ ಸಂ.05)<br>THE KARNATAKA MOTOR TRANSPORT AND OTHER ALLIED WORKERS SOCIAL SECURITY AND WELFARE BILL, 2024 | 06.03.2024 | **ರಾಜ್ಯಪಾಲರು** |
| 10. | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.06) | 06.03.2024 | **ರಾಜ್ಯಪಾಲರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| | THE BRUHAT BENGALURU MAHANAGARA PALIKE (AMENDMENT) BILL, 2024 | | |
| 11. | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.17)<br><br>THE KARNATAKA AGRICULTURAL PRODUCE MARKETING (REGULATION AND DEVELOPMENT) (AMENDMENT) BILL, 2024 | **06.03.2024** | **ರಾಜ್ಯಪಾಲರು** |
| 12. | ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ,2023 (2023ರ ವಿಧಾನ ಸಭೆಯ ವಿಧೇಯಕ ಸಂಖ್ಯೆ–13)<br><br>THE CODE OF CIVIL PROCEDURE (KARNATAKA AMENDMENT) BILL, 2023 | **18.02.2024** | **ರಾಷ್ಟ್ರಪತಿ ಯವರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 13. | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023 (ವಿಧೇಯಕ ಸಂ.04)<br><br>THE KARNATAKA AGRICULTURAL PRODUCE MARKETING (REGULATION AND DEVELOPMENT) (AMENDMENT) BILL, 2024 | **06.03.2024** | **ರಾಜ್ಯಪಾಲರು** |
| 14. | ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.21)<br><br>THE KARNATAKA STAMP (AMENDMENT) BILL, 2024 | **21.03.2024** | **ರಾಜ್ಯಪಾಲರು** |
| 15. | ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.24)<br><br>THE KARNATAKA LAND REVENUE (AMENDMENT) BILL, 2024 | **21.03.2024** | **ರಾಜ್ಯಪಾಲರು** |
| 16. | ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರುಗಳ ವಿಧೇಯಕ, 2024 (ವಿಧೇಯಕ ಸಂ.08) | **21.05.2024** | **ರಾಜ್ಯಪಾಲರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| | THE KARNATAKA PROFESSIONAL CIVIL ENGINEERS BILL, 2024 | | |
| 17. | ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024 (ವಿಧೇಯಕ ಸಂ.15)<br><br>THE UNIVERSITY OF TRANS-DISCEPLINARY HEALTH SCIENCES AND TECHNOLOGY (AMENDMENT) BILL, 2024 | **05.04.2024** | ರಾಜ್ಯಪಾಲರು |
| 18. | ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ, 2023 (ಬಿಲ್ ಸಂಖ್ಯೆ–17)<br><br>THE KARAVALI DEVELOPMENT BOARD BILL, 2023 (LA Bill No. 17) | **05.04.2024** | ರಾಜ್ಯಪಾಲರು |
| 19. | ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–33) | **20.03.2024** | ರಾಜ್ಯಪಾಲರು |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| | THE KARNATAKA TRANSPARENCY IN PUBLIC PROCUREMENTS (SECOND AMENDMENT) BILL, 2023 (LA Bill No. 33) | | |
| 20. | ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–27)<br>THE HAMPI WORLD HERITAGE AREA MANAGEMENT AUTHORITY, (AMENDMENT) BILL, 2023 (LA Bill No. 27) | **21.05.2024** | **ರಾಜ್ಯಪಾಲರು** |
| 21. | ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಚಾಚಾರ ನಿಷೇಧ ವಿಧೇಯಕ,2023 (ಬಿಲ್ ಸಂ.29)<br>THE KARNATAKA PROHIBITION OF VIOLENCE AGAINST ADVOCATES BILL, 2023(LA Bill No. 29) | **20.03.2024** | **ರಾಜ್ಯಪಾಲರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 22. | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–32)<br>THE KARNATAKA HINDU RELIGIOUS INSTITUTIONS AND CHARITABLE ENDOWMENTS (AMENDMENT) BILL, 2023(LA Bill No. 32) | **21.05.2024** | ರಾಜ್ಯಪಾಲರು |
| 23. | ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–31)<br>THE KARNATAKA CIVIL COURTS (AMENDMENT) BILL, 2023 (LA Bill No. 31) | **20.03.2024** | ರಾಜ್ಯಪಾಲರು |
| 24. | ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ವಿಧೇಯಕ, 2023(ಬಿಲ್ ಸಂಖ್ಯೆ–30)<br>THE KARNATAKA HIGH COURT (AMENDMENT) BILL, 2023 (LA Bill No. 30) | **20.03.2024** | ರಾಜ್ಯಪಾಲರು |

**7. ಪರಿಶೀಲನಾ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ**

**ಶ್ರೀ ಕೆ.ಎನ್. ರಾಜಣ್ಣ (ಅಧ್ಯಕ್ಷರು, ಪರಿಶೀಲನಾ ಸಮಿತಿ ಹಾಗೂ ಮಾನ್ಯ ಸಹಕಾರ ಸಚಿವರು) ಅವರು:–**

**"**ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:19.06.2024ರಿಂದ 02 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿ ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸಿದರು**"**.

ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**ಪ್ರಕಟಣೆ**

3. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಕೆಳಕಂಡ ಶಾಸಕರುಗಳನ್ನು ನಾಮನಿರ್ದೇಶನ ಮಾಡಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

1. ಶ್ರೀ ಶಶೀಲ್ ಜಿ. ನಮೋಶಿ
2. ಶ್ರೀಮತಿ ಭಾರತಿ ಶೆಟ್ಟಿ
3. ಶ್ರೀ ಕೆ.ಎ. ತಿಪ್ಪೇಸ್ವಾಮಿ
4. ಶ್ರೀ ಮಂಜುನಾಥ್ ಭಂಡಾರಿ

## 8. ಶೂನ್ಯ ವೇಳೆ ಪ್ರಸ್ತಾವಗಳು

1. **ಶ್ರೀ ಎಂ. ನಾಗರಾಜು** ಅವರು ರಾಜ್ಯದಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಮಂಜುನಾಥ್ ಭಂಡಾರಿ** ಅವರು ಗ್ರಾಮ ಪಂಚಾಯಿತಿಯಲ್ಲಿ ಇ–ಸ್ವತ್ತು ನಮೂನೆ 9/11ಕ್ಕೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರು ಅನುಭವಿಸುತ್ತಿರುವ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ತುಮರಿ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿರುವ ನಿವಾಸಿಗೆ ಅರ್ಹತೆ ಇದ್ದರೂ ಬಿಪಿಎಲ್ ಕಾರ್ಡ್‌ಗಳು ರದ್ದಾಗಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಉತ್ತರ ಕೊಡಿಸುವುದಾಗಿ ತಿಳಿಸಿದರು.

4. **ಶ್ರೀ ಯು.ಬಿ. ವೆಂಕಟೇಶ್** ಅವರು 2021–22ನೇ ಸಾಲಿನ ಬಿ.ಬಿ.ಎಂ.ಪಿ. ಲೆಕ್ಕಪರಿಶೋಧನಾ ವರದಿಯಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ

ನಿಯಂತ್ರಣ ವೇಳೆ 30 ಕೋಟಿಗೂ ಹೆಚ್ಚು ಅಕ್ರಮಗಳು ನಡೆದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಯವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ರಾಜ್ಯ ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗದ ವರದಿಯನ್ನು ಕೂಡಲೇ ಜಾರಿಗೊಳಿಸಿ ನ್ಯಾಯ ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಸಿ.ಎನ್. ಮಂಜೇಗೌಡ** ಅವರು ಕನಕಪುರ ತಾಲ್ಲೂಕು ಹೆಗ್ಗನೂರು ದೊಡ್ಡಿ ಗ್ರಾಮದಲ್ಲಿ ಪಶುವೈದ್ಯಾಧಿಕಾರಿಗಳು ಅವಧಿ ಮೀರಿದ ಜಂತುಹುಳು ಔಷಧಿಯನ್ನು ನೀಡಿದ ಪರಿಣಾಮ ಕುರಿಗಳು ಸಾವನ್ನಪ್ಪಿದ್ದು, ರೈತನಿಗೆ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 2.22 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 9. ಸದನದಲ್ಲಿ ಕಡ್ಡಾಯವಾಗಿ ಹಾಜರಿರಬೇಕಾದ ಮಾನ್ಯ ಸಚಿವರುಗಳ ಪಟ್ಟಿಯನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

01. ಶ್ರೀ ಕೆ.ಹೆಚ್. ಮುನಿಯಪ್ಪ, ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

02. ಶ್ರೀ ಕೆ.ಜೆ. ಜಾರ್ಜ್, ಮಾನ್ಯ ಇಂಧನ ಸಚಿವರು

03. ಶ್ರೀ ದಿನೇಶ್ ಗುಂಡೂರಾವ್, ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

04. ಶ್ರೀ ಈಶ್ವರ್ ಬಿ. ಖಂಡ್ರೆ, ಮಾನ್ಯ ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

05. ಡಾ: ಶರಣ ಪ್ರಕಾಶ್ ಪಾಟೀಲ್, ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

06. ಶ್ರೀ ಮಧು ಬಂಗಾರಪ್ಪ, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

07. ಡಾ: ಎಂ.ಸಿ. ಸುಧಾಕರ್, ಮಾನ್ಯ ಉನ್ನತ ಶಿಕ್ಷಣ ಸಚಿವರು

08. ಶ್ರೀ ಎನ್.ಎಸ್. ಬೋಸ್‌ರಾಜು, ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

09. ಶ್ರೀ ಪ್ರಿಯಾಂಕ್ ಖರ್ಗೆ, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

10. ಶ್ರೀ ಆರ್.ಬಿ. ತಿಮ್ಮಾಪೂರ, ಮಾನ್ಯ ಅಬಕಾರಿ ಸಚಿವರು

11. ಶ್ರೀ ಶರಣಬಸಪ್ಪ ದರ್ಶನಾಪೂರ ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

12. ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್, ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

13. ಶ್ರೀ ರಹೀಂ ಖಾನ್, ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

14. ಶ್ರೀಮತಿ ಲಕ್ಷ್ಮೀ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

## 10. ನಿಲುವಳಿ ಸೂಚನೆ

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ವಾಲ್ಮೀಕಿ ನಿಗಮದಲ್ಲಿ ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಟ್ಟಿರುವ ಹಣವನ್ನು ಬೇನಾಮಿ ಖಾತೆಗೆ ಜಮೆ ಮಾಡಿ ಅವ್ಯವಹಾರ ನಡೆದಿರುವ ಬಗ್ಗೆ ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ಪ್ರಸ್ತುತ ಸದರಿ ಸೂಚನೆಯಲ್ಲಿರುವ ವಿಷಯವು ಟ್ರಿಬ್ಯೂನಲ್‌ನಲ್ಲಿ ಮತ್ತು ಇ.ಡಿ.ನಲ್ಲಿ ತನಿಖೆ/ವಿಚಾರಣಾ ನಡೆಸಲಾಗುತ್ತಿದೆ ಆದುದರಿಂದ, ನಿಯಮಗಳ ರೀತ್ಯಾ ಸದನದಲ್ಲಿ ಪ್ರಸ್ತಾಪಿಸಲು ಅವಕಾಶವಿರುವುದಿಲ್ಲ ಎಂದು ಮಾನ್ಯ ಗೃಹ ಸಚಿವರು ತಿಳಿಸಿದರು.

ಮಾನ್ಯ ಸಭಾಪತಿಯವರು ಪ್ರಸ್ತುತ ನಿಲುವಳಿ ಸೂಚನೆಯಲ್ಲಿರುವ ವಿಷಯವನ್ನು ರಾಜ್ಯ ಸರ್ಕಾರವು ತನಿಖೆಗಾಗಿ ವಿಶೇಷ ತನಿಖಾ ತಂಡಕ್ಕೆ ವಹಿಸಿರುತ್ತದೆ ಜಾರಿ ನಿರ್ದೇಶನಾಲಯವು ಪ್ರಕರಣದ ತನಿಖೆ ನಡೆಸುತ್ತಿದೆ ಅಲ್ಲದೆ ಸಿಬಿಐ ತನಿಖಾ ಸಂಸ್ಥೆಯು ತನಿಖೆ ನಡೆಸುತ್ತಿದೆ. ಈ ಮೂರು ತನಿಖಾ ಸಂಸ್ಥೆಗಳು ತನಿಖೆ/ವಿಚಾರಣೆಯನ್ನು ನಡೆಸುತ್ತಿದೆ. ಈ ಸಂದರ್ಭದಲ್ಲಿ ಸದನದಲ್ಲಿ ಇದನ್ನು ಪ್ರಸ್ತಾಪಿಸಲು ಅವಕಾಶ ನೀಡಿದ್ದಲ್ಲಿ ತನಿಖೆಯ ಮೇಲೆ ಪ್ರಭಾವ ಬೀರುವ ಸಂಭವವಿರುವುದರಿಂದ ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 62ರ ರೀತ್ಯಾ ಶಾಸನಬದ್ಧ ನ್ಯಾಯಾಧೀಕರಣ ಅಥವಾ ಶಾಸನಬದ್ಧ ಪ್ರಾಧಿಕಾರದ ಮುಂದೆ ವಿಚಾರಣೆ ಹಂತದಲ್ಲಿರುವ ಪ್ರಕರಣವನ್ನು ನಿಲುವಳಿ ಸೂಚನೆಯ ಮೂಲಕ ತರಲು ಅವಕಾಶವಿರುವುದಿಲ್ಲ.

ಆದುದರಿಂದ, ಈ ವಿಷಯದ ಬಗ್ಗೆ ಅಡ್ವೊಕೇಟ್ ಜನರಲ್ ಅವರ ಅಭಿಪ್ರಾಯ ಪಡೆದು ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಅಲ್ಲಿಯವರೆಗೆ ತೀರ್ಪನ್ನು ಕಾಯ್ದಿರಿಸಲಾಗಿದೆ ಎಂದು ಪ್ರಕಟಿಸಿದರು.

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಚರ್ಚೆಗೆ ಅವಕಾಶ ನೀಡಬೇಕೆಂದು ಸದನದ ಬಾವಿಯಲ್ಲಿ ಧರಣಿ ನಿರತರಾದರು.

ಮಧ್ಯಾಹ್ನ 4.20 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು(**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.50 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಧ್ಯಾಹ್ನ 4.55 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು(**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಸಂಜೆ 5.20 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ನಿಯಮ 59ರಡಿ ನೀಡಲಾಗಿದ್ದ ಸೂಚನೆಗೆ ಮಾನ್ಯ ಸಭಾಪತಿಯವರು ಈ ಕೆಳಕಂಡ ತೀರ್ಪು ನೀಡಿದರು.

**ಸಭಾಪತಿಯವರ ತೀರ್ಪು**

**ಈ ಸಂಬಂಧದಲ್ಲಿ ನಾನು ರಾಜ್ಯದ ಅಡ್ವೊಕೇಟ್ ಜನರಲ್ ರವರೊಂದಿಗೆ ಈಗ ಚರ್ಚಿಸಿರುತ್ತೇನೆ ಅದರಂತೆ:**

ನಿಲುವಳಿ ಸೂಚನೆಯಲ್ಲಿರವ ವಿಷಯವನ್ನು ರಾಜ್ಯ ಸರ್ಕಾರವು ತನಿಖೆಗಾಗಿ ವಿಶೇಷ ತನಿಖಾ ತಂಡಕ್ಕೆ ವಹಿಸಿರುತ್ತದೆ. ಜಾರಿ ನಿರ್ದೇಶನಾಲಯವು ಪ್ರಕರಣದ ತನಿಖೆ ನಡೆಸುತ್ತಿದೆ. ಅಲ್ಲದೆ ಸಿ.ಬಿ.ಐ. ತನಿಖಾ ಸಂಸ್ಥೆಯು ಈ ಪ್ರಕರಣದ ತನಿಖೆ ನಡೆಸುತ್ತಿದೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಗಳ ನಿಯಮ 62ರ ರೀತ್ಯಾ ಶಾಸನಬದ್ಧ ನ್ಯಾಯಾಧೀಕರಣ ಅಥವಾ ಶಾಸನ ಬದ್ಧ ಪ್ರಾಧಿಕಾರದ ಮುಂದೆ ವಿಚಾರಣೆ ಹಂತದಲ್ಲಿರುವ ಪ್ರಕರಣವನ್ನು ನಿಲುವಳಿ ಸೂಚನೆಯ ಮೂಲಕ ತರಲು ಅವಕಾಶವಿರುವುದಿಲ್ಲ.

- ಈ ನಿಲುವಳಿ ಸೂಚನೆಯ ಸಂಬಂಧದಲ್ಲಿ ನ್ಯಾಯಾಲಯದಲ್ಲಿ ಇತ್ಯರ್ಥದಲ್ಲಿದ್ದು ತೀರ್ಪು ನೀಡಿರದ ಯಾವುದೇ ಸಂಗತಿಯನ್ನು ಕುರಿತು ಮಾತನಾಡತಕ್ಕದ್ದಲ್ಲ;
- ಸದಸ್ಯರೊಬ್ಬರ ಮೇಲೆ ವೈಯಕ್ತಿಕ ದೋಷಾರೋಪಣೆ ಮಾತಡತಕ್ಕದ್ದಲ್ಲ:

ಈ ಅಂಶಗಳನ್ನು ಮಾನ್ಯ ಶಾಸಕರುಗಳು ಈ ಕುರಿತು ಮಾತನಾಡುವಾಗ ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಹಿನ್ನಲೆಯಲ್ಲಿ ನನಗೆ ಪ್ರದತ್ತವಾದ ವಿವೇಚನಾ ಅಧಿಕಾರದಿಂದ ಈ ನಿಲುವಳಿ ಸೂಚನೆಯನ್ನು ನಿಯಮ 68ಕ್ಕೆ ಪರಿವರ್ತಿಸಿ ಚರ್ಚೆಗೆ ಅವಕಾಶ ನೀಡಿರುತ್ತೇನೆ.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಚರ್ಚೆಯನ್ನು ಪ್ರಾರಂಭಿಸಿದರು.

ಸಂಜೆ 5.27 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಸದನವನ್ನು ಸಂಜೆ 6.15 ಗಂಟೆಯಲ್ಲಿ ಮುಂದೂಡಿ ದಿನಾಂಕ:16.07.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **( ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:16.07.2024**

**(02)**

ಸದನವು ಬೆಳಗ್ಗೆ 10.38 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:16.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 2ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 16(216) | |
| 2. | 17(170) | |
| 3. | 18(199) | |
| 4. | 19(194) | |
| 5. | 20(263) | |
| 6. | 21(202) | |
| 7. | 22(233) | ಅರ್ಧ ಗಂಟೆ ಕಾಲಾವಧಿ ಚರ್ಚೆ |
| 8. | 23(232) | |
| 9. | 24(261) | |
| 10. | 25(149) | ಗೈರು ಹಾಜರಿ |
| 11. | 26(164) | |

12. 27(189)
13. 28(257)
14. 29(163)
15. 30(227)

**ದಿನಾಂಕ:15.07.2024ರ 1ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 05(94)

ದಿನಾಂಕ:16.07.20204ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 2ನೇ ಪಟ್ಟಿಯ ಒಟ್ಟು 103 ಪ್ರಶ್ನೆಗಳ ಪೈಕಿ 26 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯ ವೇಳೆ ಪ್ರಸ್ತಾವಗಳು

1. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)** ಅವರು ಕೊಡಗು ಜಿಲ್ಲೆಯ 67 ಗ್ರಾಮಗಳ ನೂರಾರು ಸರ್ವೆ ನಂಬರ್ ಜಾಗವನ್ನು ಗುರುತಿಸಲಾಗಿದ್ದು ಸದರಿ ಪ್ರದೇಶವನ್ನು ಮೀಸಲು ಅರಣ್ಯ ಮಾಡುವ ಪ್ರಸ್ತಾವನೆಯನ್ನು ಹಿಂಪಡೆಯುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಗೋವಿಂದರಾಜು** ಅವರು ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ವಿಶೇಷ ಚೇತನರಿಗಾಗಿ ನೀಡಲಾಗುವ ದ್ವಿಚಕ್ರ ವಾಹನಗಳನ್ನು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ನೋಂದಣಿ

ಮಾಡಿಸಲು ಸಾಧ್ಯವಾಗದೇ ವಿತರಣೆಯಲ್ಲಿ ಆಗುತ್ತಿರುವ ವಿಳಂಬದ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

4. **ಶ್ರೀ ಶರವಣ ಟಿ.ಎ** ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಉಲ್ಬಣಗೊಳ್ಳದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರ ತಂಡ ಸಮೀಕ್ಷೆ ನಡೆಸಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವುದು ಸಮೀಕ್ಷೆಯ ಉದ್ದೇಶವಾಗಿದ್ದು, ಸಮೀಕ್ಷೆ ನಡೆಸದೆ ಹಣದ ಅವ್ಯವಹಾರವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಚಿದಾನಂದ್ ಎಂ. ಗೌಡ ಹಾಗೂ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ಕ್ರೈಸ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿ ದಾಖಲಾತಿಗೆ ಸರ್ಕಾರ ರೂಪಿಸಿರುವ 50:50 ನಿಯಮವನ್ನು ಸಡಿಲಿಸಿ ಅರ್ಹ ಪ್ರತಿಭಾವಂತ ಮಕ್ಕಳಿಗೆ ಲಭ್ಯವಿರುವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಣ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಎನ್. ರವಿಕುಮಾರ್** ಅವರು ಸೇಡಂ ಪುರಸಭೆಯಲ್ಲಿ ಕಿರಿಯ ಇಂಜಿನಿಯರ್ ಆಗಿದ್ದ ಅಶೋಕ್ ಪುಟಪಾಕ್ ಅವರು ಆರು ತಿಂಗಳ ಹಿಂದೆ ಮೃತಪಟ್ಟಿದ್ದು, ನಗರಾಭಿವೃದ್ಧಿ ಇಲಾಖೆಯವರು ಸದರಿಯವರನ್ನು ಮಡಿಕೇರಿ ನಗರಸಭೆಗೆ ವರ್ಗಾವಣೆ ಮಾಡಿರುವುದಾಗಿ ಆದೇಶ ಹೊರಡಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಉತ್ತರಿಸಿದರು.

7. **ಶ್ರೀ ಶಶೀಲ್ ಜಿ. ನಮೋಶಿ** ಅವರು ಸಾರ್ವಜನಿಕರಲ್ಲಿ ಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು ಮೂಡಿಸಲು ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆ ಸಮರ್ಪಕವಾಗಿರದ ಕಾರಣ ಕರಡಿ ಹಾವಳಿಯಿಂದಾಗಿ ಸಾರ್ವಜನಿಕರು ಹಾಗೂ ಬೆಳೆ ಹಾನಿಗಳಿಂದ ರೈತರು ಕಂಗಲಾಗಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಐವನ್ ಡಿ'ಸೋಜಾ** ಅವರು ಮಾತೃ ಭಾಷೆ ಕೊಂಕಣಿ ಎಂಬ ಕಾರಣದಿಂದ ಕಾಸರಗೋಡಿನ ಕನ್ನಡ ವಿದ್ಯಾರ್ಥಿಗಳಿಗೆ ಕರ್ನಾಟಕದಲ್ಲಿ ಉನ್ನತ ಶಿಕ್ಷಣ ನಿಷೇಧ ಮಾಡಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

### 3. ಚುನಾವಣಾ ಪ್ರಸ್ತಾವಗಳು

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು ಮತ್ತು 2024-25ನೇ ಸಾಲಿನ ವಿಧಾನ ಮಂಡಲದ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಚುನಾಯಿಸಬೇಕೆಂಬ ಪ್ರಸಾವವನ್ನು ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಮಂಡಿಸಿದರು.

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ

ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಐ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಅಧಿನಿಯಮ 1994 ಕಲಂ 21(1)(viii)ರ ರೀತ್ಯಾ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಒ) ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಯ ಸದಸ್ಯ ಸ್ಥಾನಕ್ಕೆ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯಿದೆ 2016, ಸೆಕ್ಷನ್ 66(2)(ಡಿ)ರನ್ವಯ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

**4. ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ**

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2024ರಿಂದ 06 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸಿದರು.

ಸದನದ ಸಹಮತಿ ಪಡೆಯುವ ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**5. ಅಭಿನಂದನಾ ಪ್ರಸ್ತಾವ**

ಮಾನ್ಯ ಶಾಸಕರಾದ ಶ್ರೀ ಡಿ.ಎಸ್. ಅರುಣ್ ಅವರು ಐಸಿಸಿ ವಿಶ್ವ ಟಿ–20 ಪಂದ್ಯಾವಳಿಯಲ್ಲಿ ವಿಜೇತರಾದ ಭಾರತೀಯ ಕ್ರಿಕೆಟ್ ತಂಡಕ್ಕೆ ಗೌರವ ಸಮರ್ಪಿಸಲು ಅಭಿನಂದನಾ ಪ್ರಸ್ತಾವವನ್ನು ಮಂಡಿಸಿದರು.

ಮಾನ್ಯ ಶಾಸಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರು ಅನುಮೋದಿಸಿ ಮಾತನಾಡಿದರು.

ನಿಲುವಳಿ ಸೂಚನೆಯನ್ನು ನಿಯಮ 68ರಡಿ ಚರ್ಚಿಸಲು ಅವಕಾಶ ನೀಡಲಾಗಿದ್ದು, ಪ್ರಸ್ತುತ ಕಾರ್ಯಕಲಾಪಗಳ ಪಟ್ಟಿಯಲ್ಲಿರುವ ರೀತ್ಯಾ ಗಮನ

ಸೆಳೆಯುವ ಸೂಚನೆಯ ಬದಲು ಚರ್ಚೆಗೆ ಅವಕಾಶ ನೀಡಬೇಕೆಂದು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾದರು.

ಮಧ್ಯಾಹ್ನ 12.45 ಗಂಟೆಯಲ್ಲಿ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಮಧ್ಯಾಹ್ನ 2.35 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**6. ಗಮನ ಸೆಳೆಯುವ ಸೂಚನೆ**

1. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅವಧಿ ಪೂರ್ವಕ್ಕೂ ಮುನ್ನ ಜನಿಸಿದ ಮಕ್ಕಳಲ್ಲಿ ರಕ್ತದ ಕೊರತೆ ಹಾಗೂ ಅಪೌಷ್ಠಿಕತೆಯಿಂದ ಬಳಲುತ್ತಿರುವ ಸಮಸ್ಯೆಯು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಹಾಗೂ ಸೂಕ್ತ ವೈದ್ಯಕೀಯ ನೆರವು ನೀಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆದರು.

   ಮಾನ್ಯ ಸಭಾನಾಯಕರು ಉತ್ತರಿಸಿದರು.

2. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ದಿನಾಂಕ:15.05.2024ರಂದು ಹುಬ್ಬಳ್ಳಿ ನಗರದಲ್ಲಿ ಹತ್ಯೆಯಾದ ಅಂಜಲಿ ಮೋಹನ ಅಂಬಿಗ ಇವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರುವ ಹಾಗೂ ರಾಜ್ಯದಲ್ಲಿ ಕೊಲೆ ಹತ್ಯೆ ಪ್ರಕರಣದಲ್ಲಿ ಭಾಗಿಯಾದವರನ್ನು ನಿಷ್ಪಕ್ಷಪಾತ ತನಿಖೆಗೆ ಒಳಪಡಿಸಿ ಫಾಸ್ಟ್ ಟ್ರ್ಯಾಕ್ ಕೋರ್ಟ್ ಮುಖಾಂತರ ಅತೀ ಶೀಘ್ರದಲ್ಲಿ ಶಿಕ್ಷೆಯಾಗುವಂತೆ ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆದರು.

   ಮಾನ್ಯ ಗೃಹ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಸ್.ವ್ಹಿ. ಸಂಕನೂರ
2. ಡಾ: ತಳವಾರ್ ಸಾಬಣ್ಣ
3. ಶ್ರೀಮತಿ ಭಾರತಿ ಶೆಟ್ಟಿ
4. ಶ್ರೀ ಎನ್. ರವಿಕುಮಾರ್

ಮಾನ್ಯ ಗೃಹ ಸಚಿವರು ಸ್ಪಷ್ಟೀಕರಣ ನೀಡಿದರು.

**7. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಚರ್ಚೆಯನ್ನು ಮುಂದುವರೆಸಿದರು.

ಮಧ್ಯಾಹ್ನ 3.13 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 4.25 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಸಂಜೆ 4.35 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:18.07.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:18.07.2024**

**(03)**

ಸದನವು ಬೆಳಗ್ಗೆ: 10.40 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:18.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IVರ 3ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 31(413) | |
| 2. | 32(331) | ಗೈರು ಹಾಜರಿ |
| 3. | 33(337) | |
| 4. | 34(289) | |
| 5. | 35(295) | |
| 6. | 36(326) | ತಡೆಹಿಡಿಯಲಾಯಿತು |
| 7. | 37(334) | |
| 8. | 38(343) | |
| 9. | 39(351) | ತಡೆಹಿಡಿಯಲಾಯಿತು |
| 10. | 40(368) | ತಡೆಹಿಡಿಯಲಾಯಿತು |
| 11. | 41(340) | |

| | | |
|---|---|---|
| 12. | 42(338) | ತಡೆಹಿಡಿಯಲಾಯಿತು |
| 13. | 43(344) | ತಡೆಹಿಡಿಯಲಾಯಿತು |
| 14. | 44(356+357+294+409+277) | |
| 15. | 45(404) | |

ದಿನಾಂಕ:18.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 3ನೇ ಪಟ್ಟಿಯ ಒಟ್ಟು 116 ಪ್ರಶ್ನೆಗಳ ಪೈಕಿ **41** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

### 2. ಶೂನ್ಯವೇಳೆ ಪ್ರಸ್ತಾವಗಳು

**1.** **ಶ್ರೀ ಸಿ.ಟಿ. ರವಿ** ಅವರು ಮುಖ್ಯ ಶಿಕ್ಷಕರ ಬಡ್ತಿ, ಪ್ರೌಢಶಾಲಾ ಶಿಕ್ಷಕರ ಬಡ್ತಿ, ಸೇವಾ ಜೇಷ್ಠತೆಯಂತಹ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**2.** **ಶ್ರೀ ಮಂಜುನಾಥ್ ಭಂಡಾರಿ** ಅವರು ನಗರ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳ ಹಿತದೃಷ್ಠಿಯಿಂದ ಕಾನೂನು ತೊಡಕುಗಳನ್ನು ನಿವಾರಿಸಿ ಮೀಸಲಾತಿ ಪ್ರಕಟಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**3.** **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಭೀಕರ ಬರದಿಂದ ತೊಂದರೆಗೀಡಾಗಿರುವ ರೈತರಿಗೆ ಪರಿಹಾರ ನೀಡುವಲ್ಲಿ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡುವಲ್ಲಿ ತಾರತಮ್ಯ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರ ಬಳಿ ಇರುವ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಗುಡ್ಡ ಕುಸಿತ ಸಂಭವಿಸಿ ಮೃತರಾದವರ ಕುಟುಂಬಗಳಿಗೆ 10 ಲಕ್ಷ ರೂಪಾಯಿ ಪರಿಹಾರ ಘೋಷಣೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಅಂಕೋಲಾದಿಂದ ಕಾರವಾರವರೆಗಿನ 1500 ಎಕರೆ ಪ್ರದೇಶದಲ್ಲಿ ಹಸಿರುವ ನಿರ್ಮಾಣ ಯೋಜನೆಯನ್ನು ಜಾರಿಗೆ ತರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಮತಿ ಉಮಾಶ್ರೀ** ಅವರು ರಾಜ್ಯದಲ್ಲಿ ಜವಳಿ ಉದ್ಯಮದ ಕುಸಿತದಿಂದಾಗಿ ನೇಕಾರರ ಕುಟುಂಬ ಸಂಕಷ್ಟದಲ್ಲಿದ್ದು, ಅವರಿಗೆ ನೆರವು ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಶಶೀಲ್ ಜಿ. ನಮೋಶಿ** ಅವರು ಯಾದಗಿರಿ ನಗರ ವ್ಯಾಪ್ತಿಯ ಶ್ರೀ ರಾಜಕೋಟೆ ವೀರಣ್ಣ ದೇವಾಲಯದ ಅಭಿವೃದ್ಧಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಜಿಲ್ಲೆಯಲ್ಲಿ ರಾಜ್ಯದ ಏಕಮಾತ್ರ ತೋಟಗಾರಿಕೆ ವಿಶ್ವವಿದ್ಯಾಲಯವನ್ನು ದುರ್ಬಲಗೊಳಿಸುವ ಯತ್ನಗಳ ವರದಿಗಳನ್ನು ಮಾರ್ಪಡಿಸಿ, ಪುನರ್ ರಚಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಗೋವಿಂದರಾಜು** ಅವರು ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕಿನಲ್ಲಿ ಹಾನಬಾಳ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿ ಪ್ರತಿನಿತ್ಯ 3 ಅವಧಿಯಲ್ಲಿ ಕರ್ತವ್ಯ ನಿರ್ವಹಿಸಲು ವೈದ್ಯಾಧಿಕಾರಿಗಳ ನೇಮಕ ಹಾಗೂ ಅವರುಗಳ ವಾಸ್ತವ್ಯಕ್ಕೆ ವಸತಿ ಸೌಲಭ್ಯ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ಫ್ಲೆಕ್ಸ್ ಬ್ಯಾನರ್ ಹಾವಳಿ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ವರದಿಯನ್ನೊಪ್ಪಿಸುವುದು

**ಶ್ರೀ ಕೆ.ಎನ್. ರಾಜಣ್ಣ, ಅಧ್ಯಕ್ಷರು, ಪರಿಶೀಲನಾ ಸಮಿತಿ ಹಾಗೂ ಮಾನ್ಯ ಸಹಕಾರ ಸಚಿವರು** ಅವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ

(ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿಯನ್ನೊಪ್ಪಿಸಿದರು.

**4. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮುಂದುವರೆದ ಚರ್ಚೆ.

2. ಶ್ರೀ ಎಸ್.ಎಲ್. ಭೋಜೇಗೌಡ

ಮಧ್ಯಾಹ್ನ 12.35 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

**5. ಪ್ರಕಟಣೆಗಳು**

1. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 222ರ ರೀತ್ಯಾ ವಿಧಾನ ಪರಿಷತ್ತಿನ 153ನೇ ಅಧಿವೇಶನದಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ಕಾರ್ಯಕಲಾಪಗಳ ಸಲಹಾ ಸಮಿತಿಯನ್ನು ಪುನರ್ ರಚಿಸಲಾಗಿರುತ್ತದೆಂದು ಪ್ರಕಟಿಸಿದರು.

| **ಕ್ರ. ಸಂ** | **ಹೆಸರುಗಳು**<br>**ಶ್ರೀಯುತರುಗಳಾದ:** | **ಸ್ಥಾನ** |
|---|---|---|
| 01. | **ಪ್ರಾಣೇಶ್ ಎಂ.ಕೆ.**<br>ಮಾನ್ಯ ಉಪ ಸಭಾಪತಿಯವರು | **ಸದಸ್ಯರು** |
| 02. | **ಎನ್.ಎಸ್. ಬೋಸ್‌ರಾಜು**<br>ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಮತ್ತು ಸಭಾನಾಯಕರು | ಸದಸ್ಯರು |

| ಕ್ರ. ಸಂ | ಹೆಸರುಗಳು<br>ಶ್ರೀಯುತರುಗಳಾದ: | ಸ್ಥಾನ |
|---|---|---|
| 03. | **ಸಲೀಂ ಅಹಮದ್**<br>ವಿಧಾನ ಪರಿಷತ್ತಿನ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು | **ಸದಸ್ಯರು** |
| 04. | **ಸುನೀಲ್ ವಲ್ಯಾಪುರೆ**<br>ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಉಪ ನಾಯಕರು | **ಸದಸ್ಯರು** |
| 05. | **ಬಿ.ಕೆ. ಹರಿಪ್ರಸಾದ್**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |
| 06. | **ಶಶಿಲ್ ಜಿ. ನಮೋಶಿ**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |
| 07. | **ಎಸ್.ಎಲ್. ಭೋಜೇಗೌಡ**<br>ವಿಧಾನ ಪರಿಷತ್ತಿನ ಜನತಾದಳ (ಜಾ) ಶಾಸಕಾಂಗ ಪಕ್ಷದ ನಾಯಕರು | ಸದಸ್ಯರು |
| 08. | **ಎನ್. ರವಿಕುಮಾರ್**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |
| 09. | **ಬಿ.ಜಿ. ಪಾಟೀಲ್**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |

**ವಿಶೇಷ ಆಹ್ವಾನಿತರು**

| | | |
|---|---|---|
| 01. | **ಶ್ರೀ ಸಿದ್ದರಾಮಯ್ಯ** | ಮಾನ್ಯ ಮುಖ್ಯಮಂತ್ರಿಗಳು |
| 02 | **ಶ್ರೀ ಡಿ.ಕೆ. ಶಿವಕುಮಾರ್** | ಮಾನ್ಯ ಉಪ ಮುಖ್ಯಮಂತ್ರಿಗಳು |

| | | |
|---|---|---|
| 03 | **ಶ್ರೀ ಹೆಚ್.ಕೆ. ಪಾಟೀಲ್** | ಮಾನ್ಯ ಕಾನೂನು, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು |

**ಮಾನ್ಯ ಸಭಾಪತಿಯವರು ಸಮಿತಿಯ ಅಧ್ಯಕ್ಷರಾಗಿರುತ್ತಾರೆ.**

ಮಧ್ಯಾಹ್ನ 1.30 ಗಂಟೆಯಲ್ಲಿ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

3. ಶ್ರೀ ಕೆ.ಎಸ್. ನವೀನ್
4. ಶ್ರೀ ಎಸ್.ವ್ಹಿ. ಸಂಕನೂರ
5. ಶ್ರೀ ಡಿ.ಎಸ್. ಅರುಣ್
6. ಶ್ರೀ ಕೆ.ಎ. ತಿಪ್ಪೇಸ್ವಾಮಿ

**6. ಕ್ರಿಯಾಲೋಪ**

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 306ರ ರೀತ್ಯಾ, ಅಧಿಕಾರಿಗಳ ಹೆಸರನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶವಿಲ್ಲದಿರುವ ಬಗ್ಗೆ ಕ್ರಿಯಾಲೋಪವನ್ನೆತ್ತಿದರು.

## ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

7. ಶ್ರೀಮತಿ ಭಾರತಿ ಶೆಟ್ಟಿ

8. ಶ್ರೀಮತಿ ಹೇಮಲತಾ ನಾಯಕ್

ಮಧ್ಯಾಹ್ನ 4.35 ಗಂಟೆಯಲ್ಲಿ ಶ್ರೀಮತಿ ಭಾರತಿ ಶೆಟ್ಟಿ ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

9. ಶ್ರೀ ಗೋವಿಂದರಾಜು

10. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

11. ಶ್ರೀ ಪಿ.ಹೆಚ್. ಪೂಜಾರ್

ಸಂಜೆ 5.40 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

12. ಶ್ರೀ ಐವನ್ ಡಿ'ಸೋಜಾ

### ಕ್ರಿಯಾಲೋಪ

ಶ್ರೀ ಎನ್. ರವಿಕುಮಾರ್ ಅವರು ಆಡಳಿತ ಪಕ್ಷದ ಮಾನ್ಯ ಶಾಸಕರುಗಳು ನಿಲುವಳಿ ಸೂಚನೆಯಲ್ಲಿ ಪ್ರಸ್ತಾಪಿಸಿರುವ ವಿಷಯವನ್ನು ಹೊರತುಪಡಿಸಿ ಬೇರೆ ವಿಷಯಗಳನ್ನು ಮಂಡಿಸುತ್ತಿರುವುದಾಗಿ ಕ್ರಿಯಾಲೋಪವನ್ನೆತ್ತಿದರು.

ಸಂಜೆ 6.10 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಸಂಜೆ 6.28 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರು ಚರ್ಚೆಯಲ್ಲಿ ಭಾಗವಹಿಸಿದರು.

13. ಶ್ರೀ ಯು.ಬಿ. ವೆಂಕಟೇಶ್

**ಪ್ರಕಟಣೆಗಳು**

2. ದಿನಾಂಕ:20.07.2024ರಂದು ಅಂತರಾಷ್ಟ್ರೀಯ ಚೆಸ್ ದಿನಾಚರಣೆ ಹಾಗೂ ಫಿಡೆ (Federation Internationale des Eches) ಶತಮಾನೋತ್ಸವ ಅಂಗವಾಗಿ ಮಾನ್ಯ ಸಚಿವರು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಮಾನ್ಯ ವಿಧಾನ ಸಭಾ ಸದಸ್ಯರುಗಳಿಗಾಗಿ ಕರ್ನಾಟಕ ವಿಧಾನಮಂಡಲ ಅಖಿಲ ಭಾರತ ಚೆಸ್ ಫೆಡರೇಷನ್ ಸಹಯೋಗದೊಂದಿಗೆ "ವಿಧಾನ ಸೌಧ ಚೆಸ್ ಹಬ್ಬ" ಶೀರ್ಷಿಕೆ ಅಡಿ ಲೆಜಿಸ್ಲೇಟರ್ ಕಪ್–2024 ವಿಧಾನ ಸೌಧ ಓಪನ್ ರ್‍ಯಾಪಿಡ್ ಚೆಸ್ ಪಂದ್ಯಾವಳಿಯನ್ನು ದಿನಾಂಕ:20.07.2024ರ ಶನಿವಾರದಂದು ವಿಧಾನ ಸೌಧದ ನೆಲಮಹಡಿಯಲ್ಲಿರುವ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೆಳಗ್ಗೆ 10.30 ರಿಂದ ಸಂಜೆ 05.30 ಗಂಟೆವರೆಗೆ ಆಯೋಜಿಸಲಾಗಿರುತ್ತದೆ.

ಆದುದರಿಂದ, ಸದರಿ ಚೆಸ್ ಪಂದ್ಯಾವಳಿಯಲ್ಲಿ ಎಲ್ಲಾ ಮಾನ್ಯ ಸಚಿವರುಗಳು ಹಾಗೂ ವಿಧಾನ ಪರಿಷತ್ತಿನ ಶಾಸಕರುಗಳು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು (ಭಾಗವಹಿಸುವ ಶಾಸಕರುಗಳು ನೋಂದಣಿ

ಮಾಡಿಕೊಳ್ಳಲು ನಮೂನೆ ಭರ್ತಿ ಮಾಡಿ ಒದಗಿಸುವುದು) ಪ್ರಕಟಿಸಿದರು.

3. ದಿನಾಂಕ: 18.07.2024 ರಂದು ನಡೆದ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ:–

- ➢ ಪ್ರಶ್ನೆಗಳು, ಶೂನ್ಯ ವೇಳೆ ಪ್ರಸ್ತಾವಗಳು, ಗಮನ ಸೆಳೆಯುವ ಸೂಚನೆಗಳು, ನಿಯಮ 330ರ ಮೇರೆಗೆ ಚರ್ಚೆ, ನಿಯಮ 68ರ ಮೇಲಿನ ಪ್ರಸ್ತಾವನೆ ಹಾಗೂ ಅರ್ಧ ಗಂಟೆ ಕಾಲಾವಧಿ ಚರ್ಚೆಗಳನ್ನು ತೆಗೆದುಕೊಳ್ಳುವುದು.
- ➢ ಸರ್ಕಾರದಿಂದ ಸ್ವೀಕರಿಸಲಾಗುವ ವಿಧೇಯಕಗಳನ್ನು ಮಂಡಿಸಿ, ಅಂಗೀಕರಿಸುವುದು.
- ➢ ಎರಡು ದಿನಗಳ ಕಾಲ ಮಾನ್ಯ ಶಾಸಕರ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಒಳಗೊಂಡಂತೆ ಶಾಸಕರ ದಿನಾಚರಣೆಯನ್ನು ನಡೆಸಲು ತೀರ್ಮಾನಿಸಿದ್ದು, ಮಾನ್ಯ ಸದಸ್ಯರುಗಳೆಲ್ಲರೂ, ತಾವು ಆಸಕ್ತಿ ಹೊಂದಿರುವ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ವಿವರಗಳನ್ನು ಒದಗಿಸುವುದು.

ಕಾರ್ಯಕಲಾಪಗಳ ಸಲಹಾ ಸಮಿತಿಯ ಈ ವರದಿಗೆ ಸದನವು ಅನುಮೋದಿಸುವುದೆಂದು ಭಾವಿಸುತ್ತೇನೆ.

ಸದನವನ್ನು ಸಂಜೆ 7.08 ಗಂಟೆಯಲ್ಲಿ ಮುಂದೂಡಿ ದಿನಾಂಕ:19.07.2024ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

*****

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಶುಕ್ರವಾರ, ದಿನಾಂಕ:19.07.2024**

**(04)**

ಸದನವು ಬೆಳಗ್ಗೆ: 10.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:19.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–Vರ 4ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 46(312)
2. 47(323)
3. 48(537)
4. 49(436)
5. 50(511)
6. 51(447)
7. 52(440)
8. 53(497)
9. 54(541)
10. 55(476)
11. 56(434)

12. 57(325+480+547)

13. 58(484) ಕಾಲಾವಕಾಶ

14. 59(316)

15. 60(514)

ದಿನಾಂಕ:19.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Vರ 4ನೇ ಪಟ್ಟಿಯ ಒಟ್ಟು 136 ಪ್ರಶ್ನೆಗಳ ಪೈಕಿ **66** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಬೆಳಗ್ಗೆ 11.50 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಡಾ: ಧನಂಜಯ ಸರ್ಜಿ** ಅವರು ಕೇಂದ್ರ ಹಾಗೂ ಕೆ.ಪಿ.ಎಸ್.ಸಿ.ಯು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳು ಒಂದೇ ದಿನಾಂಕದಂದು ನಿಗದಿಯಾಗುವುದರಿಂದ ಪ್ರತಿಭಾನ್ವಿತ ಪದವೀಧರ ನಿರುದ್ಯೋಗಿಗಳು ಅವಕಾಶದಿಂದ ವಂಚಿತರಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆಯಲ್ಲಿ ಕಟ್ಟಡ ಕಾರ್ಮಿಕ ಫಲಾನುಭವಿಗಳ ಧನಸಹಾಯ ಹಣವನ್ನು ಶ್ರೀ ದ್ಯಾವಪ್ಪ ತಳವಾರ ಎಂಬುವವರು ಇತರೆ ಖಾತೆಗಳಿಗೆ ವರ್ಗಾಯಿಸಿಕೊಂಡಿದ್ದು, ಅವರ ಮೇಲೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಾರ್ಮಿಕ ಸಚಿವರು ಕಾಲಾವಕಾಶ ಕೋರಿದರು.

3. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಆರೋಗ್ಯ ಇಲಾಖೆಯಲ್ಲಿ ಖಾಲಿಯಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

4. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ 2ನೇ ಅತಿ ದೊಡ್ಡ ಅರೇಶಂಕರ ಕೆರೆಯ ಜೀರ್ಣೋದ್ಧಾರದ ಅಭಿವೃದ್ಧಿಗೆ ಯೋಜನೆ ರೂಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರಿಸಿದರು.

5. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ ತಲಕಾವೇರಿಯಲ್ಲಿರುವ ಅಗಸ್ತ್ಯಲಿಂಗೇಶ್ವರ ಲಿಂಗಕ್ಕೆ ಮುಕ್ತಿ ದೊರಕಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಕೆ.ಎಸ್. ನವೀನ್** ಅವರು ರಾಜ್ಯದಲ್ಲಿ ರೈತರಿಗೆ ಬೇಕಾದ ರಸಗೊಬ್ಬರ ಸರಿಯಾದ ಸಮಯದಲ್ಲಿ ಪೂರೈಕೆಯಾಗುತ್ತಿಲ್ಲದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

7. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯಲ್ಲಿರುವ ರಾಬಕೊವಿ ಹಾಲು ಒಕ್ಕೂಟಕ್ಕೆ ಆಡಳಿತಾಧಿಕಾರಿ ನೇಮಕ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಹಕಾರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಕರಾವಳಿ ಭಾಗದಲ್ಲಿರುವ **"ಮನ್ಸ"** ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಪ್ರಸ್ತಾವನೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಐವನ್ ಡಿ'ಸೋಜಾ** ಅವರು ಕೇಂದ್ರ ಸಾರಿಗೆ ಇಲಾಖೆಯ ವಾಣಿಜ್ಯ ವಾಹನಗಳಿಗೆ ಪ್ಯಾನಿಕ್ ಬಟನ್ ಮತ್ತು ಜಿಪಿಆರ್‌ಎಸ್ ಎಂಬ ಅವೈಜ್ಞಾನಿಕ ಸಾಧನವನ್ನು ಅಳವಡಿಸಲು ಆದೇಶ ಹೊರಡಿಸಿದ್ದು, ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರಿಂದ ಎಫ್‌ಸಿ ಮಾಡುವ ಸಂದರ್ಭದಲ್ಲಿ ಹೆಚ್ಚಿನ ದರ ವಸೂಲಿ ಮಾಡುತ್ತಿರುವುದರಿಂದ ತೊಂದರೆಯುಂಟಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀಮತಿ ಹೇಮಲತಾ ನಾಯಕ್** ಅವರು ರಾಜ್ಯದ ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ಶುಚಿ ಯೋಜನೆಯನ್ನು ಮರು ಜಾರಿಗೆ ತರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

### 3. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಮಂಜುನಾಥ್ ಭಂಡಾರಿ** ಅವರು ಗ್ರಾಮ ಪಂಚಾಯಿತಿಯಲ್ಲಿ ಇ–ಸ್ವತ್ತು ನಮೂನೆ 9/11ಕ್ಕೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರು ಅನುಭವಿಸುತ್ತಿರುವ

ಸಮಸ್ಯೆಗಳ ಕುರಿತು ದಿನಾಂಕ:15.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಸಿ.ಎನ್. ಮಂಜೇಗೌಡ** ಅವರು ಕನಕಪುರ ತಾಲ್ಲೂಕು ಹೆಗ್ಗನೂರು ದೊಡ್ಡಿ ಗ್ರಾಮದಲ್ಲಿ ಪಶು ವೈದ್ಯಾಧಿಕಾರಿಗಳು ಅವಧಿ ಮೀರಿದ ಜಂತು ಹುಳು ಔಷಧಿಯನ್ನು ನೀಡಿದ ಪರಿಣಾಮ ಕುರಿಗಳು ಸಾವನ್ನಪ್ಪಿದ್ದು, ರೈತನಿಗೆ ಪರಿಹಾರ ಒದಗಿಸುವ ಕುರಿತು ದಿನಾಂಕ:15.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಶಶೀಲ್ ಜಿ. ನಮೋಶಿ** ಅವರು ಸಾರ್ವಜನಿಕರಲ್ಲಿ ಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು ಮೂಡಿಸಲು ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆ ಸಮರ್ಪಕವಾಗಿರದ ಕಾರಣ ಕರಡಿ ಹಾವಳಿಯಿಂದಾಗಿ ಸಾರ್ವಜನಿಕರು ಹಾಗೂ ಬೆಳೆ ಹಾನಿಗಳಿಂದ ರೈತರು ಕಂಗಲಾಗಿರುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀಮತಿ ಉಮಾಶ್ರೀ** ಅವರು ರಾಜ್ಯದಲ್ಲಿ ಜವಳಿ ಉದ್ಯಮದ ಕುಸಿತದಿಂದಾಗಿ ನೇಕಾರರ ಕುಟುಂಬ ಸಂಕಷ್ಟದಲ್ಲಿದ್ದು, ಅವರಿಗೆ ನೆರವು ನೀಡುವ ಕುರಿತು ದಿನಾಂಕ:18.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

**4. ನಿಲುವಳಿ ಸೂಚನೆ**

ಮಾನ್ಯ ಶಾಸಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಮಂಜೂರಾಗಿದ್ದ

ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಂಡಿರುವ ಬಗ್ಗೆ ನಿಯಮ 59ರಡಿ ಪ್ರಸ್ತಾಪಿಸಿದರು.

ಮಾನ್ಯ ಸಭಾಪತಿಯವರು ನಿಲುವಳಿ ಸೂಚನೆಯನ್ನು ನಿಯಮ 72ರ ಅಡಿಯಲ್ಲಿ ಚರ್ಚಿಸಲು ಅವಕಾಶ ಕಲ್ಪಿಸಿರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

## 5. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ಮುಂದುವರೆದ ಚರ್ಚೆ.

14. ಶ್ರೀ ಎಂ. ನಾಗರಾಜು

## 6. ಕ್ರಿಯಾಲೋಪ

ಲೋಕಸಭೆಯ ಸಂಸದರು ಹಾಗೂ ಹಾಲಿ ಸಚಿವರ ಹೆಸರನ್ನು ಸದನದಲ್ಲಿ ಪ್ರಸ್ತಾಪಿಸಬಾರದೆಂದು ಮಾನ್ಯ ಶಾಸಕರಾದ ಶ್ರೀ ಶಶೀಲ್ ಜಿ. ನಮೋಶಿ ಅವರು ಕ್ರಿಯಾಲೋಪವನ್ನೆತ್ತಿದರು.

## ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ವಾಲ್ಮೀಕಿ ನಿಗಮದಲ್ಲಿ ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಟ್ಟಿರುವ ಹಣವನ್ನು ಬೇನಾಮಿ ಖಾತೆಗೆ ಜಮೆ ಮಾಡಿ ಅವ್ಯವಹಾರ ನಡೆದಿರುವ ಕುರಿತು ಮುಂದುವರೆದ ಚರ್ಚೆ.

15. ಶ್ರೀ ಎನ್. ರವಿಕುಮಾರ್

ಮಧ್ಯಾಹ್ನ 1.00 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ಮಧ್ಯಾಹ್ನ 1.20 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

ಮಾನ್ಯ ಶಾಸಕರಾದ ಶ್ರೀ ಎನ್. ರವಿಕುಮಾರ್ ಅವರು ಚರ್ಚೆಯನ್ನು ಮುಂದುವರೆಸಿದರು.

ಸದನವನ್ನು ಮಧ್ಯಾಹ್ನ 1.55 ಗಂಟೆಗೆ ಮುಂದೂಡಿ ದಿನಾಂಕ:22.07.2024ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:22.07.2024**

**(05)**

ಸದನವು ಬೆಳಗ್ಗೆ: 11.00 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:22.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 61(643) | |
| 2. | 62(640) | |
| 3. | 63(724) | |
| 4. | 64(615) | ಕಾಲಾವಕಾಶ |
| 5. | 65(609) | |
| 6. | 66(671) | |
| 7. | 67(701) | ಅರ್ಧ ಗಂಟೆ ಕಾಲಾವಧಿ ಚರ್ಚೆ |
| 8. | 68(757) | |
| 9. | 69(574) | |
| 10. | 70(657) | ವರ್ಗಾವಣೆ |
| 11. | 71(649) | |

12. 72(707)
13. 73(715)
14. 74(592) ಕಾಲಾವಕಾಶ
15. 75(571)

**ದಿನಾಂಕ:15.07.2024ರ 1ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 03(120)

ದಿನಾಂಕ:22.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಒಟ್ಟು 166 ಪ್ರಶ್ನೆಗಳ ಪೈಕಿ **43** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**2. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ನಡೆದ ಚರ್ಚೆಗೆ ಮಾನ್ಯ ಮುಖ್ಯಮಂತ್ರಿಯವರು ಉತ್ತರಿಸಿದರು.

ಮಾನ್ಯ ಮುಖ್ಯಮಂತ್ರಿಯವರ ಲಿಖಿತ ಹೇಳಿಕೆಯನ್ನು ವಿರೋಧಿಸಿ, ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಭಾವಿಯಲ್ಲಿ ಧರಣಿ ನಿರತರಾದರು.

ಮಧ್ಯಾಹ್ನ 1.40 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 2.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

ಮಧ್ಯಾಹ್ನ 2.10 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 3. ಶೂನ್ಯವೇಳೆ ಪ್ರಸ್ತಾವಗಳು

1. **ಡಾ: ಯತೀಂದ್ರ ಎಸ್** ಅವರು ಪಶ್ಚಿಮ ಘಟ್ಟಗಳು ಸೇರಿದಂತೆ ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳನ್ನು ಅವೈಜ್ಞಾನಿಕವಾಗಿ ನಿರ್ಮಿಸುತ್ತಿರುವುದರಿಂದ ಭೂಕುಸಿತ, ಪ್ರವಾಹ ಮತ್ತು ನೈಸರ್ಗಿಕ ವಿಕೋಪಗಳು ಹೆಚ್ಚಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಲೋಕೋಪಯೋಗಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಸಿ.ಟಿ. ರವಿ** ಅವರು ಶ್ರೀ ಗುರುದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆಯ ಅರ್ಚಕರಿಗೆ ವೇತನ ನಿಗದಿಪಡಿಸಿ ಪ್ರತಿ ತಿಂಗಳು ಕಾಲಮಿತಿಯೊಳಗೆ ವೇತನ ಪಾವತಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಶರವಣ ಟಿ.ಎ.** ಅವರು ರಾಜ್ಯದಲ್ಲಿ ಡೆಂಗ್ಯೂ ಹೆಚ್ಚಳದ ಹಿನ್ನೆಲೆಯಲ್ಲಿ 108 ಅಂಬುಲೆನ್ಸ್‌ಗೆ 7 ವರ್ಷವಾದರೂ ಹೊಸ ಟೆಂಡರ್ ಕರೆಯದೆ ಇರುವ ಹಾಗೂ ಆರೋಗ್ಯ ಇಲಾಖೆಯಲ್ಲಿ ಖಾಲಿಯಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಶಶೀಲ್ ಜಿ. ನಮೋಶಿ** ಅವರು ಕಲಬುರಗಿ ಜಿಲ್ಲೆಯ ಆರ್‌ಎಮ್‌ಎಸ್‌ಎ ಪ್ರೌಢ ಶಾಲೆ ಸಿಬ್ಬಂದಿಗಳಿಗೆ 4–5 ತಿಂಗಳುಗಳಿಂದ ವೇತನ ಪಾವತಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀಮತಿ ಉಮಾಶ್ರೀ** ಅವರು ಹೆಣ್ಣು ಭ್ರೂಣ ಹತ್ಯೆ ಪ್ರಕರಣಗಳು ವ್ಯಾಪಕವಾಗಿ ಹರಡುತ್ತಿದ್ದು, ಈ ಕೃತ್ಯದಲ್ಲಿ ಭಾಗಿಯಾದ ದುಷ್ಟರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಡಾ: ಎಂ.ಜಿ. ಮುಳೆ** ಅವರು ಬಸವ ಕಲ್ಯಾಣದಲ್ಲಿ ಅನುಭವ ಮಂಟಪ ಕಾಮಗಾರಿ ಅಭಿವೃದ್ಧಿಗೆ ಹಾಗೂ ಪ್ರವಾಸಿ ತಾಣವಾಗಿಸಲು ಮೂಲ ಸೌಕರ್ಯ ಒದಗಿಸಲು ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು 2022–23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ಕಾನೂನು ಪದವಿ ವಿದ್ಯಾರ್ಥಿಗಳ 2ನೇ ವರ್ಷದ ಪರೀಕ್ಷೆಯ ಫಲಿತಾಂಶ ಪ್ರಕಟಿಸದೆ ತಡೆಹಿಡಿದಿರುವುದರಿಂದ ಕೂಡಲೇ ಪ್ರಕಟಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

### 3. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಎಂ. ನಾಗರಾಜು** ಅವರು ರಾಜ್ಯದಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವ ಕುರಿತು ದಿನಾಂಕ:22.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ರಾಜ್ಯ ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗದ ವರದಿಯನ್ನು ಕೂಡಲೇ ಜಾರಿಗೊಳಿಸಿ ನ್ಯಾಯ ಒದಗಿಸುವ ಕುರಿತು ದಿನಾಂಕ:15.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ 67 ಗ್ರಾಮಗಳ ನೂರಾರು ಸರ್ವೆ ನಂಬರ್ ಜಾಗವನ್ನು ಗುರುತಿಸಲಾಗಿದ್ದು ಸದರಿ ಪ್ರದೇಶವನ್ನು ಮೀಸಲು ಅರಣ್ಯ ಮಾಡುವ ಪ್ರಸ್ತಾವನೆಯನ್ನು ಹಿಂಪಡೆಯುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಶರವಣ ಟಿ.ಎ.** ಅವರು ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಉಲ್ಬಣಗೊಳ್ಳದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರ ತಂಡ ಸಮೀಕ್ಷೆ ನಡೆಸಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವುದು ಸಮೀಕ್ಷೆಯ ಉದ್ದೇಶವಾಗಿದ್ದು, ಸಮೀಕ್ಷೆ ನಡೆಸದೆ ಹಣದ ಅವ್ಯವಹಾರವಾಗಿರುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಚಿದಾನಂದ್ ಎಂ. ಗೌಡ ಹಾಗೂ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ಕ್ರೈಸ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿ ದಾಖಲಾತಿಗೆ ಸರ್ಕಾರ ರೂಪಿಸಿರುವ 50:50 ನಿಯಮವನ್ನು ಸಡಿಲಿಸಿ ಅರ್ಹ ಪ್ರತಿಭಾವಂತ ಮಕ್ಕಳಿಗೆ ಲಭ್ಯವಿರುವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಣ ನೀಡುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.
7. **ಶ್ರೀ ಮಂಜುನಾಥ್ ಭಂಡಾರಿ** ಅವರು ನಗರ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳ ಹಿತದೃಷ್ಟಿಯಿಂದ ಕಾನೂನು ತೊಡಕುಗಳನ್ನು ನಿವಾರಿಸಿ ಮೀಸಲಾತಿ ಪ್ರಕಟಿಸುವ ಕುರಿತು ದಿನಾಂಕ: 18.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.
8. **ಶ್ರೀ ಐವನ್ ಡಿ'ಸೋಜಾ** ಅವರು ಕೇಂದ್ರ ಸಾರಿಗೆ ಇಲಾಖೆಯ ವಾಣಿಜ್ಯ ವಾಹನಗಳಿಗೆ ಪ್ಯಾನಿಕ್ ಬಟನ್ ಮತ್ತು ಜಿಪಿಆರ್‌ಎಸ್ ಎಂಬ ಅವೈಜ್ಞಾನಿಕ ಸಾಧನವನ್ನು ಅಳವಡಿಸಲು ಆದೇಶ ಹೊರಡಿಸಿದ್ದು, ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರಿಂದ ಎಫ್‌ಸಿ ಮಾಡುವ ಸಂದರ್ಭದಲ್ಲಿ ಹೆಚ್ಚಿನ ದರ ವಸೂಲಿ ಮಾಡುತ್ತಿರುವುದರಿಂದ ತೊಂದರೆಯುಂಟಾಗಿರುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

### 5. ನಿಲುವಳಿ ಸೂಚನೆ

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಪೆಟ್ರೋಲ್/ಡೀಸೆಲ್ ಒಳಗೊಂಡಂತೆ ದೈನಂದಿನ ಬಳಕೆಯ ವಸ್ತುಗಳ ಬೆಲೆ ಏರಿಕೆಯಿಂದಾಗಿ ಬಡ ಹಾಗೂ ಮಧ್ಯಮ ವರ್ಗದವರ ಆರ್ಥಿಕ ಸ್ಥಿತಿ ಶೋಚನೀಯವಾಗಿರುವ ಬಗ್ಗೆ

ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ನಿಯಮ 330 ರಡಿ ಪ್ರಸ್ತಾಪಿಸಲು ಅವಕಾಶ ನೀಡಿರುವುದಾಗಿ ಮಾನ್ಯ ಸಭಾಪತಿಯವರು ತಿಳಿಸಿದರು.

**6. ಶಾಸನ ರಚನೆ**

1. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ"**ವನ್ನು ವಿಧಾನ ಪರಿಷತ್ತಿನ ಪರಿಶೀಲನಾ ಸಮಿತಿಯ ಶಿಫಾರಸ್ಸಿನ ರೀತ್ಯಾ ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಹಕಾರ ಸಚಿವರು ಸೂಚಿಸಿದರು.

   ಧ್ವನಿ ಮತದ ಮೂಲಕ ವಿಧೇಯಕವನ್ನು ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ"**ವನ್ನು ವಿಧಾನ ಪರಿಷತ್ತಿನ ಪರಿಶೀಲನಾ ಸಮಿತಿಯ ಶಿಫಾರಸ್ಸಿನ ರೀತ್ಯಾ ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಹಕಾರ ಸಚಿವರು ಸೂಚಿಸಿದರು.

   ಧ್ವನಿ ಮತದ ಮೂಲಕ ವಿಧೇಯಕವನ್ನು ಅಂಗೀಕರಿಸಲಾಯಿತು.

**7. ಗಮನ ಸೆಳೆಯುವ ಸೂಚನೆ**

1. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ, ಸಿ.ಟಿ. ರವಿ, ಕೇಶವ ಪ್ರಸಾದ್ ಎಸ್, ಸುನೀಲ್ ವಲ್ಯಾಪುರ್, ಡಾ: ಧನಂಜಯ ಸರ್ಜಿ, ಭಾರತಿ ಶೆಟ್ಟಿ ಹಾಗೂ ಇತರರು** ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಉಪ ಯೋಜನೆಗಳಿಗೆ ಮೀಸಲಿಡಲಾಗಿದ್ದ ಹಣವನ್ನು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆದರು.

ಮಧ್ಯಾಹ್ನ 4.08 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಸಿ.ಟಿ. ರವಿ
2. ಛಲವಾದಿ ಟಿ. ನಾರಾಯಣಸ್ವಾಮಿ
3. ಎನ್. ರವಿಕುಮಾರ್
4. ಕೆ.ಎಸ್. ನವೀನ್
5. ಕೆ.ಎ. ತಿಪ್ಪೇಸ್ವಾಮಿ
6. ಸುನೀಲ್ ವಲ್ಯಾಪುರ್
7. ಪ್ರಕಾಶ್ ಕೆ. ರಾಥೋಡ್
8. ಹೆಚ್.ಪಿ. ಸುಧಾಮ್ ದಾಸ್
9. ಡಿ.ಎಸ್. ಅರುಣ್
10. ಡಾ: ತಳವಾರ್ ಸಾಬಣ್ಣ

ಮಾನ್ಯ ಸಮಾಜ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ನೀಡಿದ ಉತ್ತರವನ್ನು ಒಪ್ಪದೆ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

**2.** **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ

ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು, ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಎಲ್ಲಾ ಅಧಿಕಾರ, ಹಣಕಾಸು ಮತ್ತು ಅಧಿಕಾರಿಗಳನ್ನು ಹಸ್ತಾಂತರಗೊಳಿಸಲು ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ ಅಮೃತ ಮಹೋತ್ಸವ ಆಚರಿಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಸ್ಪಷ್ಟೀಕರಣ ನೀಡಿದರು.

ಸಂಜೆ 5.10 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

**3.** **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದ ಅಂತರಗಂಗೆ ಮುಖ್ಯರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡವು ಸುಮಾರು 60 ವರ್ಷಗಳ ಹಳೆಯದಾಗಿರುವುದರಿಂದ ಸದರಿ ಶಾಲಾ ಕಟ್ಟಡವನ್ನು ಪುನ:ಶ್ಚೇತನಗೊಳಿಸಲು ಅನುದಾನ ಮಂಜೂರು ಆಗಿದ್ದರು ಅನುದಾನ ಬಿಡುಗಡೆ ಮಾಡದಿರುವ ಕುರಿತು ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಸ್.ವ್ಹಿ. ಸಂಕನೂರ

2. ಶ್ರೀ ಕೆ.ಎಸ್. ನವೀನ್

3. ಶ್ರೀ ಶರವಣ ಟಿ.ಎ

ಸಂಜೆ 5.45 ಗಂಟೆಯಲ್ಲಿ 5 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಸಂಜೆ 6.05 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಗಮನ ಸೆಳೆಯುವ ಸೂಚನೆ**

**4. ಶ್ರೀ ಐವನ್ ಡಿ'ಸೋಜಾ** ಅವರು 1987ರಿಂದ 1994 ಮತ್ತು 95ನೇ ಶೈಕ್ಷಣಿಕ ಸಾಲಿನ ಒಳಗೆ ಪ್ರಾರಂಭವಾಗಿರುವ 118 ಶಾಲೆಗಳಿಗೆ ಸೀಮಿತವಾಗಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಆದೇಶವಾಗಿದ್ದರೂ ಅವುಗಳಲ್ಲಿ 07 ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸದೇ ಇರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಪುಟ್ಟಣ್ಣ

2. ಶ್ರೀ ಎಸ್.ಎಲ್. ಭೋಜೇಗೌಡ

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

## 8. ನಿಯಮ 330ರ ಮೇರೆಗೆ

1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದ ಇತರೆ ಭಾಗಗಳಿಂದ ಕರಾವಳಿಗೆ ಸಂಪರ್ಕ ಕೊಂಡಿಯಾಗಿರುವ ಘಾಟಿ ಪರಿಸರದಲ್ಲಿ ಬರುವ ಹೆದ್ದಾರಿಯಲ್ಲಿ ಹೆಚ್ಚು ಮಳೆಯಿಂದಾಗಿ ರಸ್ತೆ ಕುಸಿತದಿಂದ ಸಂಚಾರ ವ್ಯತ್ಯಯ ಉಂಟಾಗುತ್ತಿರುವುದನ್ನು ತಪ್ಪಿಸಲು ಶಾಶ್ವತ ಮತ್ತು ದೀರ್ಘಕಾಲಿಕ ಉಪಯೋಗದ ಯೋಜನೆಯನ್ನು ಸರ್ಕಾರ ರೂಪಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಲೋಕೋಪಯೋಗಿ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಐವನ್ ಡಿ'ಸೋಜಾ
2. ಶ್ರೀ ಬಿ.ಕೆ. ಹರಿಪ್ರಸಾದ್
3. ಶ್ರೀ ಎಸ್.ಎಲ್. ಭೋಜೇಗೌಡ
4. ಶ್ರೀ ಮಂಜುನಾಥ್ ಭಂಡಾರಿ

ಮಾನ್ಯ ಲೋಕೋಪಯೋಗಿ ಸಚಿವರು ಸ್ಪಷ್ಟೀಕರಣ ನೀಡಿದರು.

### ಗಮನ ಸೆಳೆಯುವ ಸೂಚನೆ

5. **ಶ್ರೀ ಪುಟ್ಟಣ್ಣ** ಅವರು ರಾಜ್ಯದಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಕೇಂದ್ರ ಪಠ್ಯಕ್ರಮದ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಿರುವ ಶಾಲೆಗಳನ್ನು ಅನಧಿಕೃತ ಶಾಲೆಗಳೆಂದು ಘೋಷಿಸುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

**ನಿಯಮ 330ರ ಮೇರೆಗೆ**

2. **ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಶ್ರೀ ಪುಟ್ಟಣ್ಣ** ಅವರುಗಳು ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಉಚ್ಚನ್ಯಾಯಾಲಯ ತೀರ್ಪು ನೀಡಿದರೂ ಸಹ ಸರ್ಕಾರ ಅನುಮತಿಸದಿರುವುದರಿಂದ ಉಂಟಾಗಿರುವ ದುಷ್ಪರಿಣಾಮಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಶಶೀಲ್ ಜಿ. ನಮೋಶಿ

2. ಶ್ರೀ ಎಸ್.ಎಲ್. ಭೋಜೇಗೌಡ

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

ಸಂಜೆ 7.00 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:23.07.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:23.07.2024**

**(06)**

ಸದನವು ಬೆಳಗ್ಗೆ: 10.35 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:23.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 76(803) | |
| 2. | 77(748) | |
| 3. | 78(759) | ವರ್ಗಾವಣೆ |
| 4. | 79(742) | |
| 5. | 80(804) | |
| 6. | 81(790) | |
| 7. | 82(751) | |
| 8. | 83(770) | |
| 9. | 84(835) | |
| 10. | 85(849) | |
| 11. | 86(750) | ಗೈರು ಹಾಜರಿ |

12. 87(802)
13. 88(779)
14. 89(807)
15. 90(836)

**ದಿನಾಂಕ:15.07.2024ರ 1ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 25(149)

**ದಿನಾಂಕ:18.07.2024ರ 3ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 42(338) ದಿನಾಂಕ:25.07.2024ರಂದು ಪ್ರಸ್ತಾಪಿಸುವುದು
2. 40(368) ಗೈರು ಹಾಜರಿ

ದಿನಾಂಕ:23.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಒಟ್ಟು 97 ಪ್ರಶ್ನೆಗಳ ಪೈಕಿ **36** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರ ಪರವಾಗಿ ಮಾನ್ಯ ಕಂದಾಯ ಸಚಿವರು ಮಂಡಿಸಿದರು.

**2. ಶೂನ್ಯವೇಳೆ ಪ್ರಸ್ತಾವಗಳು**

**1.** **ಡಾ: ಧನಂಜಯ ಸರ್ಜಿ** ಅವರು ಕರಾವಳಿ ಮತ್ತು ಮಲೆನಾಡಿನಲ್ಲಿ ಅತಿವೃಷ್ಟಿಯಿಂದ ಆಗುತ್ತಿರುವ ಗಂಭೀರ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

**2.** **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಕೆಟಿಪಿಪಿ ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸಿ ಕರ್ನಾಟಕ ರಾಜ್ಯ ಹ್ಯಾಬಿಟೆಟ್ ಕೇಂದ್ರ ರೂ.400ಕೋಟಿಗೂ ಅಧಿಕ ಮೊತ್ತದ ಕಾಮಗಾರಿಗಳನ್ನು ಕೈಗೊಂಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಸಹಕಾರ ಮಾರಾಟ ಮಹಾಮಂಡಳ ನಿಯಮಿತ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನಿವೃತ್ತ ಅಧಿಕಾರಿ ಕೆ.ಎಂ. ಆಶಾ ಅವರನ್ನು ನೇಮಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಹಕಾರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

4. **ಶ್ರೀ ಪಿ.ಹೆಚ್. ಪೂಜಾರ್** ಅವರು ಪತ್ರಿಕೋದ್ಯಮ ವಿಷಯದಲ್ಲಿ ರೆಗ್ಯೂಲರ್ ಆಗಿ ಸ್ನಾತಕೋತ್ತರ ಪದವಿ ಪಡೆದು ಸ್ಥಳೀಯ ಜಿಲ್ಲಾ ಮಟ್ಟದ ಕನ್ನಡ ದಿನಪತ್ರಿಕೆ ಆರಂಭಿಸಿರುವ ಸಂಪಾದಕರಿಗೆ ಪ್ರತಿ ತಿಂಗಳು ಎರಡು ಪುಟ ಜಾಹೀರಾತು ವ್ಯವಸ್ಥೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

5. **ಶ್ರೀ ಡಿ.ಎಸ್. ಅರುಣ್** ಅವರು ಆಯೂರ್ ವಿಶ್ವವಿದ್ಯಾಲಯ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

6. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ಶಿವಮೊಗ್ಗ ನಗರದಲ್ಲಿ ಕೆಎಸ್‌ಸಿಎ ವತಿಯಿಂದ ನಿರ್ಮಾಣಗೊಂಡಿರುವ ಕ್ರಿಕೆಟ್ ಕ್ರೀಡಾಂಗಣಕ್ಕೆ ಮಳೆಯಿಂದಾಗಿ ಪಕ್ಕದಲ್ಲಿರುವ ಕೆರೆ ಹಾಗೂ ಚರಂಡಿಗಳಿಗೆ ನೀರು ನುಗ್ಗಿ ಕ್ರೀಡೆಗೆ ತೊಂದರೆ ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

7. **ಶ್ರೀ ಎನ್. ರವಿಕುಮಾರ್** ಅವರು ರಾಯಚೂರು ಜಿಲ್ಲೆಯಲ್ಲಿ ದರ್ವೇಶ್ ಗ್ರೂಪ್ ಆಫ್ ಕಂಪನಿ ಎಂಬ ಸಂಸ್ಥೆಯು ಹೂಡಿಕೆದಾರರಿಗೆ ಅಧಿಕ ಬಡ್ಡಿ ನೀಡುವುದಾಗಿ ಹೇಳಿ ಅವರಿಂದ ಡಿಪಾಸಿಟ್ ರೂಪದಲ್ಲಿ ಹಣ ಪಡೆದು ವಂಚಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

8. **ಶ್ರೀ ಶಾಂತರಾಮ್ ಬುಡ್ನ** ಸಿದ್ದಿ ಅವರು ಉತ್ತರ ಕನ್ನಡ ಜಿಲ್ಲೆಯಲ್ಲಿ ಸರ್ಕಾರದ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಮನೆಗಳು ನಿರ್ಮಾಣ ಹಂತದಲ್ಲಿದ್ದು ಬಿಲ್ ಪಾವತಿಗೆ ಬಾಕಿ ಇರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕಂದಾಯ ಸಚಿವರು ತಿಳಿಸಿದರು.

9. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲಿನ ಒತ್ತಡ ಕಡಿಮೆ ಮಾಡಲು ಬೆಂಗಳೂರು ಸಮೀಪವೇ ಪರ್ಯಾಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಸಂಬಂಧ ಜರೂರಾಗಿ ಕೇಂದ್ರದಿಂದ ಅನುಮೋದನೆ ಪಡೆಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರಿಸಿದರು.

**3. ನಿಲುವಳಿ ಸೂಚನೆ**

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ರಾಜ್ಯದಲ್ಲಿ ಕೊಲೆ, ಅತ್ಯಾಚಾರ, ಮಕ್ಕಳ ಮೇಲಿನ ದೌರ್ಜನ್ಯ, ಸೈಬರ್ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿರುವ ಕುರಿತು ನಿಯಮ 59ರಡಿ ಪ್ರಸ್ತಾಪಿಸಿದರು.

ನಿಯಮ 330ರಡಿ ಚರ್ಚೆಗೆ ಅವಕಾಶ ನೀಡಿರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಶ್ರೀ ಯು.ಬಿ. ವೆಂಕಟೇಶ್ ಅವರು ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಅಕ್ರಮದ ಬಗ್ಗೆ ಕೇಂದ್ರ ಸರ್ಕಾರದ ಇಡಿ ಅಧಿಕಾರಿಗಳು ತನಿಖೆ ನೆಪದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಉದ್ದೇಶ ಪೂರ್ವಕವಾಗಿ ಕಿರುಕುಳ ನೀಡುತ್ತಿದ್ದು, ಇಡಿ ಅಧಿಕಾರಿಗಳು ತಮ್ಮ ಸಂವಿಧಾನ ಬದ್ದ ಕರ್ತವ್ಯಗಳನ್ನು ಬಿಟ್ಟು ಆರೋಪಗಳನ್ನು ಒಪ್ಪಿಕೊಳ್ಳುವಂತೆ ಇಲಾಖಾಧಿಕಾರಿಗಳಿಗೆ ಬೆದರಿಕೆವೊಡ್ಡುತ್ತಿರುವ ವಿಷಯದ ಕುರಿತು ನಿಯಮ 68ರಡಿ ಚರ್ಚೆಗೆ ಅವಕಾಶವಿಲ್ಲವೆಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**"ಗದ್ದಲ"**

ಮಧ್ಯಾಹ್ನ 12.45 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 1.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಶ್ರೀ ಯು.ಬಿ. ವೆಂಕಟೇಶ್ ಅವರು ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಅಕ್ರಮದ ಬಗ್ಗೆ ಕೇಂದ್ರ ಸರ್ಕಾರದ ಇಡಿ ಅಧಿಕಾರಿಗಳು ತನಿಖೆ ನೆಪದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಉದ್ದೇಶ ಪೂರ್ವಕವಾಗಿ ಕಿರುಕುಳ ನೀಡುತ್ತಿದ್ದು, ಇಡಿ ಅಧಿಕಾರಿಗಳು ತಮ್ಮ ಸಂವಿಧಾನ

ಬದ್ದ ಕರ್ತವ್ಯಗಳನ್ನು ಬಿಟ್ಟು ಆರೋಪಗಳನ್ನು ಒಪ್ಪಿಕೊಳ್ಳುವಂತೆ ಇಲಾಖಾಧಿಕಾರಿಗಳಿಗೆ ಬೆದರಿಕೆವೊಡ್ಡುತ್ತಿರುವ ವಿಷಯದ ಕುರಿತು ನಿಯಮ 68ರಡಿ ಪ್ರಸ್ತಾಪಿಸಲು ಅನುಮತಿ ಕೋರಿದರು.

**ಮಾನ್ಯ ಸಭಾಪತಿಯವರು ಈ ಕೆಳಕಂಡಂತೆ ತೀರ್ಪು ನೀಡಿದರು.**

**"**ನಿಯಮ 68ರಡಿಯಲ್ಲಿನ ಸೂಚನೆಯಲ್ಲಿರುವ ವಿಷಯದ ಕುರಿತು ರಾಜ್ಯ ಸರ್ಕಾರವು ತನಿಖೆಗಾಗಿ ವಿಶೇಷ ತನಿಖಾ ತಂಡಕ್ಕೆ ವಹಿಸಿರುತ್ತದೆ. ಜಾರಿ ನಿರ್ದೇಶನಾಲಯವು ಪ್ರಕರಣದ ತನಿಖೆ ನಡೆಸುತ್ತಿದೆ. ಅಲ್ಲದೆ ಸಿಬಿಐ ತನಿಖಾ ಸಂಸ್ಥೆಯು ಈ ಪ್ರಕರಣದ ತನಿಖೆ ನಡೆಸುತ್ತಿದೆ. ಇಡಿ ಸ್ವತಂತ್ರ ತನಿಖಾ ಸಂಸ್ಥೆಯಾಗಿದೆ.

ಸಂಸದೀಯ ವ್ಯವಸ್ಥೆಯಲ್ಲಿ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ವಿಷಯದ ಮೇಲೆ ಚರ್ಚೆ ನಡೆಸುವುದು ಕ್ರಮಬದ್ದವಲ್ಲವೆನ್ನುವ ನಿಯಮ ಬಹು ಚೆನ್ನಾಗಿ ಸುಸ್ಥಾಪಿತವಾಗಿರುವುದರಿಂದ ನಿಯಮ 68ರಡಿಯಲ್ಲಿ ನೀಡಿರುವ ಸೂಚನೆಯು ನ್ಯಾಯಾಧೀಕರಣದ ಮುಂದೆ ಇರುವುದರಿಂದ ಚರ್ಚೆಗೆ ಅವಕಾಶ ನಿರಾಕರಿಸಲಾಗಿದೆ**"**.

ಮಧ್ಯಾಹ್ನ 1.15 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.00 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

**4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಅ.** ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ

ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ(2024ರ ವರದಿ ಸಂಖ್ಯೆ–1) ಯನ್ನು ಸಭೆಯ ಮುಂದೆ ಮಂಡಿಸಿದರು.

**ಆ.** ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016ರ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ(2024ರ ವರದಿ ಸಂಖ್ಯೆ–2)ಯನ್ನು ಸಭೆಯ ಮುಂದೆ ಮಂಡಿಸಿದರು.

## 5. ವಿತ್ತೀಯ ಕಾರ್ಯಕಲಾಪ

2024–25ನೇ ಸಾಲಿನ ಪೂರಕ ಅಂದಾಜು (ಮೊದಲನೇ ಕಂತು)ಗಳನ್ನು ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಮಂಡಿಸಿದರು.

## 6. ವರದಿಯನ್ನೊಪ್ಪಿಸುವುದು

ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 2023–24ನೇ ಸಾಲಿನ 39ನೇ ವರದಿಯನ್ನು ಮಾನ್ಯ ಶಾಸಕರಾದ ಶ್ರೀ ಟಿ.ಎನ್. ಜವರಾಯಿ ಗೌಡ ಅವರು ಸದನಕ್ಕೆ ಒಪ್ಪಿಸಿದರು.

## 7. ಗಮನ ಸೆಳೆಯುವ ಸೂಚನೆ

**1.** **ಶ್ರೀ ಮಂಜುನಾಥ್ ಭಂಡಾರಿ** ಅವರು ಕರಾವಳಿ ಹಾಗೂ ಮಲೆನಾಡಿನ ಸಾಂಸ್ಕೃತಿಕ ಕಲೆಯಾಗಿರುವ ಯಕ್ಷಗಾನವನ್ನು ಪ್ರೋತ್ಸಾಹಿಸಲು ಯಕ್ಷಗಾನ ಅಕಾಡೆಮಿಯನ್ನು ಮೇಲ್ದರ್ಜೆಗೇರಿಸಿ ಯಕ್ಷಗಾನ ಅಭಿವೃದ್ಧಿ ಪ್ರಾಧಿಕಾರ ರಚಿಸಲು ಅನುದಾನವನ್ನು ಒದಗಿಸುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಬಿ.ಕೆ. ಹರಿಪ್ರಸಾದ್
2. ಶ್ರೀ ಐವನ್ ಡಿ'ಸೋಜಾ
3. ಶ್ರೀ ಎಸ್.ಎಲ್. ಭೋಜೇಗೌಡ
4. ಶ್ರೀಮತಿ ಭಾರತಿ ಶೆಟ್ಟಿ
5. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಸ್ಪಷ್ಟೀಕರಣ ನೀಡಿದರು.

**8. ನಿಯಮ 330ರ ಮೇರೆಗೆ**

1. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಭೂರಹಿತರಿಗೆ ಹಾಗೂ ಬಡರೈತರಿಗೆ ಸರ್ಕಾರ ನೀಡಿರುವ ಭೂಮಿಗೆ ಪಹಣಿಯಲ್ಲಿ ಪಿ.ನಂ. ನಮೂದಿಸದಿರುವುದರಿಂದ ಹಾಗೂ ಸದರಿ ಭೂಮಿಯನ್ನು ಇತರರಿಗೆ ಪರಭಾರೆ ಮಾಡಲು ವಿಧಿಸಿರುವ ನಿರ್ಬಂಧವನ್ನು ಸಡಿಲಿಸದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

   ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

   1. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
   2. ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)

   ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಶ್ರೀಯುತರುಗಳಾದ ಡಾ: ಧನಂಜಯ ಸರ್ಜಿ, ಶ್ರೀ ಎಸ್.ವ್ಹಿ. ಸಂಕನೂರ, ಕೆ.ಎ. ತಿಪ್ಪೇಸ್ವಾಮಿ, ಶಶೀಲ್ ಜಿ. ನಮೋಶಿ, ಗೋವಿಂದರಾಜು ಹಾಗೂ ಡಾ: ತಳವಾರ್ ಸಾಬಣ್ಣ** ಅವರುಗಳು ರಾಜ್ಯಾದ್ಯಂತ ಡೆಂಗ್ಯೂ

ಖಾಯಿಲೆ ವ್ಯಾಪಕವಾಗಿ ಹರಡುತ್ತಿದ್ದು, ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಎಸ್.ವ್ಹಿ. ಸಂಕನೂರ
2. ಶ್ರೀ ಕೆ.ಎ. ತಿಪ್ಪೇಸ್ವಾಮಿ
3. ಶ್ರೀ ಶಶೀಲ್ ಜಿ. ನಮೋಶಿ
4. ಡಾ: ತಳವಾರ್ ಸಾಬಣ್ಣ
5. ಶ್ರೀಮತಿ ಭಾರತಿ ಶೆಟ್ಟಿ
6. ಶ್ರೀ ಐವನ್ ಡಿ'ಸೋಜಾ

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

3. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ದೇವನಹಳ್ಳಿ ತಾಲ್ಲೂಕು ಹರಳೂರಿನಲ್ಲಿ ಕೆಐಎಡಿಬಿ ಅಭಿವೃದ್ಧಿ ಪಡಿಸಿರುವ ಹೈಟೆಕ್ ಏರೋಸ್ಪೇಸ್ ಮತ್ತು ಡಿಫೆನ್ಸ್ ಪಾರ್ಕ್‌ನ 2ನೇ ಹಂತದಲ್ಲಿ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಮೆ: ಸೆಂಟರ್ ಫಾರ್ ಎಜುಕೇಷನ್ ಅಂಡ್ ಸೋಷಿಯಲ್ ಸ್ಟಡೀಸ್ ರವರಿಗೆ 116.16 ಎಕರೆ ಜಮೀನನ್ನು 99 ವರ್ಷದ ಗುತ್ತಿಗೆಗೆ ಶೈಕ್ಷಣಿಕ ಅಭಿವೃದ್ಧಿ/ವಿಶ್ವವಿದ್ಯಾಲಯ ಆರಂಭಕ್ಕೆ ಕ್ಯಾಬಿನೆಟ್ ಅನುಮತಿ ನೀಡಿರುವುದರ ಬದಲಾಗಿ 10 ವರ್ಷಗಳ ಗುತ್ತಿಗೆ ಕಮ್ ಮಾರಾಟ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎ. ತಿಪ್ಪೇಸ್ವಾಮಿ

2. ಶ್ರೀ ಬಿ.ಕೆ. ಹರಿಪ್ರಸಾದ್

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಸ್ಪಷ್ಟೀಕರಣ ನೀಡಿದರು.

**ಗಮನ ಸೆಳೆಯುವ ಸೂಚನೆ**

**2. ಶ್ರೀಯುತರುಗಳಾದ ಸಿ.ಟಿ. ರವಿ, ಎನ್. ರವಿಕುಮಾರ್, ಛಲವಾದಿ ಟಿ. ನಾರಾಯಣಸ್ವಾಮಿ, ಪ್ರತಾಪ್ ಸಿಂಹ ನಾಯಕ್ ಕೆ., ಭಾರತಿ ಶೆಟ್ಟಿ, ಕೇಶವ ಪ್ರಸಾದ್ ಎಸ್ ಹಾಗೂ ಪಿ.ಹೆಚ್. ಪೂಜಾರ್** ಅವರುಗಳು ಪಶ್ಚಿಮಘಟ್ಟ ಮಲೆನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ಉಂಟಾಗುತ್ತಿರುವ ಭೂಕುಸಿತಕ್ಕೆ ಕಾರಣಗಳೇನು ಎಂಬ ಕುರಿತು ವೈಜ್ಞಾನಿಕವಾಗಿ ಅಧ್ಯಯನ ನಡೆಸಿ ಪಶ್ಚಿಮಘಟ್ಟಗಳ ಸಂರಕ್ಷಣೆಗೆ ಕ್ರಮವಹಿಸುವುದರ ಜೊತೆಗೆ ರಸ್ತೆ ಅಭಿವೃದ್ಧಿ/ನಿರ್ವಹಣೆ ಹಾಗೂ ಬೆಳೆ ಹಾನಿಗೆ ವಿಶೇಷ ಪ್ಯಾಕೇಜ್ ನಿಗದಿ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಸಿ.ಟಿ. ರವಿ

2. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

**9. ಅರ್ಧಗಂಟೆ ಕಾಲಾವಧಿ ಚರ್ಚೆ**

**1.** ಮಾನ್ಯ ಶಾಸಕರಾದ ಶ್ರೀ ಎನ್. ರವಿಕುಮಾರ್ ಅವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ವಿತರಿಸಿದ ವಸ್ತುಗಳ ಕುರಿತು ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:6(21)ಕ್ಕೆ ನೀಡಿದ

ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು ಅರ್ಧ ಗಂಟೆ ಕಾಲಾವಧಿಯ ಚರ್ಚೆಯನ್ನು ಪ್ರಾರಂಭಿಸಿದರು.

ಸಂಜೆ 5.55 ಗಂಟೆಯಲ್ಲಿ ಶ್ರೀಮತಿ ಭಾರತಿ ಶೆಟ್ಟಿ ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಉತ್ತರಿಸಿದರು.

ಸಂಜೆ 6.05 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಪೀಠದಲ್ಲಿ ಆಸೀನರಾದರು.

**2.** ಮಾನ್ಯ ಶಾಸಕರಾದ ಡಾ: ತಳವಾರ್ ಸಾಬಣ್ಣ ಅವರು ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಕರ ಕುರಿತು ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ9(61)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು ಅರ್ಧ ಗಂಟೆ ಕಾಲಾವಧಿಯ ಚರ್ಚೆಯನ್ನು ಪ್ರಾರಂಭಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾವಹಿಸಿದರು.

1. ಶ್ರೀಮತಿ ಹೇಮಲತಾ ನಾಯಕ್
2. ಶ್ರೀ ಶಶೀಲ್ ಜಿ. ನಮೋಶಿ

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

**10. ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:23.07.2024ರಂದು "ಕರ್ನಾಟಕ ವಿಧಾನಮಂಡಲ(ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ 2024"ನ್ನು ಹಾಗೂ "ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ(ಕ್ಷೇಮಾಭಿವೃದ್ಧಿ)

ವಿಧೇಯಕ, 2024"ನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**ಅರ್ಧಗಂಟೆ ಕಾಲಾವಧಿ ಚರ್ಚೆ**

3. ಮಾನ್ಯ ಶಾಸಕರಾದ ಶ್ರೀ ಕೇಶವ ಪ್ರಸಾದ್ ಎಸ್ ಅವರು ರಾಜ್ಯದ ನೇಕಾರರ ಕುರಿತು ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:22(233)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು ಅರ್ಧ ಗಂಟೆ ಕಾಲಾವಧಿಯ ಚರ್ಚೆಯನ್ನು ಪ್ರಾರಂಭಿಸಿದರು.

ಮಾನ್ಯ ಶಾಸಕರಾದ ಶ್ರೀಮತಿ ಉಮಾಶ್ರೀ ಅವರು ಚರ್ಚೆಯಲ್ಲಿ ಭಾಗವಹಿಸಿದರು.

ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಉತ್ತರಿಸಿದರು.

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 113ರ ಮೇರೆಗೆ ವಿಧಾನ ಸಭೆಯು ದಿನಾಂಕ:23.07.2024ರಂದು ಈ ಕೆಳಕಂಡ ವಿಧೇಯಕಗಳನ್ನು ಪುನರ್ ಪರ್ಯಾಲೋಚಿಸಿ ಅಂಗೀಕರಿಸಿತೆಂದು ತಿಳಿಸಿರುತ್ತಾರೆ.

1. ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ **2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ**
2. ಕರ್ನಾಟಕ ವಿಧಾನಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿ ಮತ್ತು ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ **2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ**

## 11. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಕುಶಾಲಪ್ಪ ಎಂ.ಪಿ.(ಸುಜಾ)** ಅವರು ಕೊಡಗು ಜಿಲ್ಲೆಯ ತಲಕಾವೇರಿಯಲ್ಲಿರುವ ಅಗಸ್ತ್ಯಲಿಂಗೇಶ್ವರ ಲಿಂಗಕ್ಕೆ ಮುಕ್ತಿ ದೊರಕಿಸುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.
2. **ಶ್ರೀ ಕೇಶವ ಪ್ರಸಾದ್ ಎಸ್** ಅವರು ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ 2ನೇ ಅತಿದೊಡ್ಡ ಅರೇಶಂಕರ ಕೆರೆಯ ಜೀರ್ಣೋದ್ಧಾರದ ಅಭಿವೃದ್ಧಿಗೆ ಯೋಜನೆ ರೂಪಿಸುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.
3. **ಶ್ರೀಮತಿ ಹೇಮಲತಾ ನಾಯಕ್** ಅವರು ರಾಜ್ಯದ ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ಶುಚಿ ಯೋಜನೆಯನ್ನು ಮರುಜಾರಿಗೆ ತರುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.
4. **ಶ್ರೀ ಶಶೀಲ್ ಜಿ. ನಮೋಶಿ** ಅವರು ಕಲಬುರಗಿ ಜಿಲ್ಲೆಯ ಆರ್‌ಎಮ್‌ಎಸ್‌ಎ ಪ್ರೌಢ ಶಾಲೆ ಸಿಬ್ಬಂದಿಗಳಿಗೆ 4–5 ತಿಂಗಳುಗಳಿಂದ ವೇತನ ಪಾವತಿಸದಿರುವ ಕುರಿತು ದಿನಾಂಕ:22.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

ಸಂಜೆ 7.30 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ: 24.07.2024ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:24.07.2024**

**(07)**

ದಿನಾಂಕ:24.07.2024 ರಂದು ಬೆಳಗ್ಗೆ 10.05 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಕಟಣೆ

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 2(2)ರ ಪ್ರಕಾರ ವಿಧಾನ ಪರಿಷತ್ತಿನ ಮಾನ್ಯ ಶಾಸಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಇವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ದಿನಾಂಕ:24.07.2024ರಿಂದ ಜಾರಿಗೆ ಬರುವಂತೆ ಮಾನ್ಯತೆ ನೀಡಿರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಮಾನ್ಯ ಕಂದಾಯ ಸಚಿವರು ಅಭಿನಂದಿಸಿ ಮಾತನಾಡಿದರು.

ಶ್ರೀಯುತರುಗಳಾದ:

1. ಎಸ್.ಎಲ್. ಭೋಜೇಗೌಡ
2. ಸಲೀಂ ಅಹಮದ್
3. ಸಿ.ಟಿ. ರವಿ
4. ಎನ್.ಎಸ್. ಬೋಸ್‌ರಾಜು, ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಮಾನ್ಯ ಸಭಾನಾಯಕರು

5. ಹೇಮಲತಾ ನಾಯಕ್

6. ಶಾಂತಾರಾಮ್ ಬುಡ್ನ ಸಿದ್ದಿ

7. ಐವನ್ ಡಿ'ಸೋಜಾ

8. ತಿಪ್ಪಣ್ಣಪ್ಪ ಕಮಕನೂರ

9. ಎಸ್.ವ್ಹಿ. ಸಂಕನೂರ

10. ಕೇಶವ ಪ್ರಸಾದ್ ಎಸ್

11. ಎನ್. ರವಿಕುಮಾರ್

12. ಗೋವಿಂದರಾಜು

13. ಪ್ರತಾಪ್ ಸಿಂಹ ನಾಯಕ್ ಕೆ.

14. ಎಂ. ನಾಗರಾಜು

15. ಎ. ವಸಂತ ಕುಮಾರ್

16. ಭಾರತಿ ಶೆಟ್ಟಿ

17. ಶರವಣ ಟಿ.ಎ

18. ಪಿ.ಹೆಚ್. ಪೂಜಾರ್

19. ಬಿ.ಕೆ. ಹರಿಪ್ರಸಾದ್

20. ಎಂ.ಎಲ್. ಅನಿಲ್ ಕುಮಾರ್

21. ಉಮಾಶ್ರೀ

22. ಶಶೀಲ್ ಜಿ. ನಮೋಶಿ

23. ಎಂ.ಕೆ. ಪ್ರಾಣೇಶ್, ಮಾನ್ಯ ಉಪ ಸಭಾಪತಿಗಳು

ಮಾನ್ಯ ವಿರೋಧ ಪಕ್ಷದ ನಾಯಕರು ಧನ್ಯವಾದಗಳನ್ನು ಅರ್ಪಿಸಿದರು.

## 2. ಪ್ರಶ್ನೋತ್ತರ

ದಿನಾಂಕ:24.07.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 7ನೇ ಪಟ್ಟಿಯ ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 91(1006)
2. 92(950)
3. 93(927)
4. 94(910)
5. 95(882)
6. 96(919)
7. 97(858)
8. 98(958)
9. 99(880)
10. 100(862)
11. 101(959)
12. 102(908)

ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

13. 103(996)
14. 104(865)
15. 105(984)

**ದಿನಾಂಕ:23.07.2024ರ 6ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 86(750)

ದಿನಾಂಕ:24.07.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 7ನೇ ಪಟ್ಟಿಯ ಒಟ್ಟು 139 ಪ್ರಶ್ನೆಗಳ ಪೈಕಿ 39ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

### 3. ಶೂನ್ಯ ವೇಳೆ ಪ್ರಸ್ತಾವಗಳು

1. **ಶ್ರೀ ಕೇಶವ ಪ್ರಸಾದ್ ಎಸ್.** ಅವರು ಗುಮ್ಮಟ ನಗರಿಯಲ್ಲಿ ರಿಮ್ಜಿಮ್ ಪಾನ್ ಹಾವಳಿಯಿಂದ ಯುವಕರ ಜೀವನ ಹಾಳಾಗಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಸಿ.ಟಿ. ರವಿ** ಅವರು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕಲಶೇಶ್ವರ ಸ್ವಾಮಿ ದೇವಸ್ಥಾನಕ್ಕೆ ಸೇರಿದ ಸಾವಿರಾರು ಎಕರೆ ಜಮೀನನ್ನು ನ್ಯಾಯಾಲಯವು ಅರಣ್ಯ ಭೂಮಿ ಎಂದು ತೀರ್ಪು ನೀಡಿರುವ ಹಿನ್ನಲೆಯಲ್ಲಿ ಸಾಗುವಳಿದಾರರಿಗೆ ಪರ್ಯಾಯ ಜಮೀನು ನೀಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

3. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಬೆಳೆ ವಿಮೆ ನೋಂದಣಿ ಸಮಸ್ಯೆ ತ್ವರಿತ ಗತಿಯಲ್ಲಿ ಸರಿಪಡಿಸಿ ರೈತರ ಬೆಳೆ ವಿಮೆ ನೋಂದಣಿಗೆ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

4. **ಶ್ರೀ ಮಂಜುನಾಥ್ ಭಂಡಾರಿ** ಅವರು ಕುಂದಾಪುರ, ಕಾರ್ಕಳ ಮತ್ತು ಪಶ್ಚಿಮ ಘಟ್ಟದ ತಪ್ಪಲಿನ ಜನರ ಹಿತದೃಷ್ಠಿಯಿಂದ ಸರ್ವೆ ನಡೆಸಿ ಅಗತ್ಯವಾಗಿ ಸಂಪರ್ಕ ಸೇತುವೆಯನ್ನು ನಿರ್ಮಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಲೋಕೋಪಯೋಗಿ ಸಚಿವರು ಉತ್ತರಿಸಿದರು.

5. **ಶ್ರೀ ಪುಟ್ಟಣ್ಣ** ಅವರು 2024–25ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರುತಿಸಿ ತಾತ್ಕಾಲಿಕ ಪಟ್ಟಿ ಹೊರಡಿಸಿರುವ ಆದೇಶವನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಮತಿ ಭಾರತಿ ಶೆಟ್ಟಿ** ಅವರು ಗೃಹಲಕ್ಷ್ಮಿ ಯೋಜನೆ ಅಡಿಯಲ್ಲಿ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಚಿದಾನಂದ್ ಎಂ. ಗೌಡ** ಅವರು ತುಮಕೂರು ಜಿಲ್ಲೆಯಲ್ಲಿ ನಿವೇಶನ ಮತ್ತು ವಸತಿ ರಹಿತ ಕುಟುಂಬಗಳಿಗೆ ತುರ್ತಾಗಿ ವಸತಿ ಸೌಲಭ್ಯ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವಸತಿ ಸಚಿವರು ಉತ್ತರಿಸಿದರು.

8. **ಶ್ರೀ ಕುಶಾಲಪ್ಪ ಎಂ.ಪಿ(ಸುಜಾ)** ಅವರು ಕೊಡಗು ಜಿಲ್ಲೆಯಲ್ಲಿ ಅತಿವೃಷ್ಠಿಯಿಂದಾಗಿ ಅಪಾರ ನಷ್ಟವುಂಟಾಗಿದ್ದು ಬೆಳೆಗಾರರಿಗೆ ಪರಿಹಾರ ಹಾಗೂ ಮುಂಜಾಗ್ರತ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

9. **ಡಾ: ತಳವಾರ್ ಸಾಬಣ್ಣ** ಅವರು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿರುವ ತಳವಾರ ಜಾತಿಯ ಪ್ರಮಾಣ ಪತ್ರ ಮತ್ತು ಸಿಂಧುತ್ವ ಪಡೆಯಲು ಆಗುತ್ತಿರುವ ತೊಂದರೆಯ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ರಾಮೋಜಿಗೌಡ** ಅವರು ಹಿಂಬಡ್ತಿಗೊಳಗಾದ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಆಯಾ ಪದವಿಯನ್ನು ಪರಿಗಣಿಸಿ GPT ಶಿಕ್ಷಕರೆಂದು ಸೇವಾ ಜೇಷ್ಠತೆಯೊಂದಿಗೆ ಪದನಾಮೀಕರಣ ಮಾಡಿ ಶಿಕ್ಷಕರಿಗೆ ಅನುಕೂಲ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಯು.ಬಿ. ವೆಂಕಟೇಶ್** ಅವರು ಕಡೂರು ತಾಲ್ಲೂಕಿನ ಅಜ್ಜಂಪುರ ವ್ಯಾಪ್ತಿಯ ಕಲ್ಕೆರೆ ಗ್ರಾಮ ಪಂಚಾಯತಿಯಲ್ಲಿ ಬೆಳೆ ನಷ್ಟ ಪರಿಹಾರ ಹಣವನ್ನು ಖಾತೆದಾರರಿಗೆ ಪಾವತಿಸದೆ ಇತರರಿಗೆ ಪಾವತಿಸಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ಕಾನೂನು ರೀತ್ಯಾ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

12. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ/ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಆಸುಪಾಸಿನ ಅಡಿಕೆ ಕೃಷಿಕರಿಗೆ ಕೊಳೆರೋಗ ಭೀತಿ ಎದುರಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

### 4. ನಿಲುವಳಿ ಸೂಚನೆ

ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಬಗ್ಗೆ ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ನಿಯಮ 68 ರಡಿ ಚರ್ಚೆಗೆ ಅವಕಾಶವನ್ನು ತಿರಸ್ಕರಿಸಲಾಗಿದೆ ಎಂದು ತಿಳಿಸಿದರು.

ಮಧ್ಯಾಹ್ನ 1.40 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

**5. ಗಮನ ಸೆಳೆಯುವ ಸೂಚನೆಗಳು**

1. **ಶ್ರೀಯುತರುಗಳಾದ ಯು.ಬಿ. ವೆಂಕಟೇಶ್, ಐವನ್ ಡಿ'ಸೋಜಾ ಹಾಗೂ ಯತೀಂದ್ರ ಎಸ್,** ಅವರುಗಳು ರಾಜ್ಯ ಸರ್ಕಾರದ ಅಧಿಕಾರಿಗೆ ಕೇಂದ್ರ ಸರ್ಕಾರದ ಅಧಿಕಾರಿಗಳು ನಮ್ಮ ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿಗಳು ಮತ್ತು ಸಚಿವರುಗಳ ವಿರುದ್ಧ ಹೇಳಿಕೆಯನ್ನು ದಾಖಲಿಸುವಂತೆ ಒತ್ತಾಯವನ್ನು ಹೇರಿ, ಜೀವ ಬೆದರಿಕೆಯನ್ನು ಹಾಕಿರುವ ಸಂಬಂಧದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹೆಚ್ಚುವರಿ ನಿರ್ದೇಶಕರು ದಿನಾಂಕ: 22.07.2024ರಂದು ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿದ್ದು, ಕೇಂದ್ರ ಸರ್ಕಾರದ ಉನ್ನತ ಅಧಿಕಾರಿಗಳು ರಾಜ್ಯ ಸರ್ಕಾರಿ ಅಧಿಕಾರಿಗಳ ಕೆಲಸಕ್ಕೆ ಅಡ್ಡಿಯುಂಟು ಮಾಡುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದರು.

**"ಗದ್ದಲ"**

ಸದನವನ್ನು ಮಧ್ಯಾಹ್ನ 4.10ರಲ್ಲಿ 10 ನಿಮಿಷಗಳ ಕಾಲ ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ಸದನವು 5.50 ಗಂಟೆಯಲ್ಲಿ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡಿದರು.

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ: 24.07.2024**ರಂದು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

| | |
|---|---|
| **1.** | ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2024 |
| **2.** | ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2024 |
| **3.** | ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024 |
| **4.** | ಕರ್ನಾಟಕ ಧನವಿನಿಯೋಗ (ಸಂ:04) ವಿಧೇಯಕ, 2024 |

ಸದನವನ್ನು ಸಂಜೆ 6.05 ಗಂಟೆಯಲ್ಲಿ ಮುಂದೂಡಿ ದಿನಾಂಕ:25.07.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತಮೂರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:25.07.2024**

**(08)**

ಸದನವು ಬೆಳಗ್ಗೆ: 11.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### **1. ಧರಣಿ**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಬಗ್ಗೆ ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡದಿರುವ ಕುರಿತು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ದಿನಾಂಕ:24.07.2024ರಂದು ನೀಡಲಾಗಿದ್ದ ನಿಲುವಳಿ ಸೂಚನೆಯನ್ನು ಚರ್ಚೆಗೆ ಅವಕಾಶ ನೀಡಬೇಕೆಂದು ಕೋರಿ ಧರಣಿ ಮುಂದುವರೆಸಿದರು.

ಮಾನ್ಯ ಮುಖ್ಯಮಂತ್ರಿಯವರು ಮಾತನಾಡಿದರು.

**“ ಗದ್ದಲ”**

### **2. ಸಭಾಪತಿಯವರ ತೀರ್ಪು**

ಮಾನ್ಯ ಸಭಾಪತಿಯವರು ಈ ಕೆಳಕಂಡಂತೆ ತೀರ್ಪು ನೀಡಿದರು.

ದಿನಾಂಕ:24.07.2024ರಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮೂಡಾ) ನಿವೇಶನ ಹಂಚಿಕೆಗೆ ಸಂಬಂಧಪಟ್ಟಂತೆ ನಡೆದಿದೆ ಎನ್ನಲಾದ ಅವ್ಯವಹಾರ ಕುರಿತು ವಿರೋಧ ಪಕ್ಷದವರು ನೀಡಿದ ನಿಲುವಳಿ ಸೂಚನೆಗೆ **“**ರಾಜ್ಯ ಸರ್ಕಾರವು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸದರಿ

ವಿಷಯದ ಬಗ್ಗೆ ಪರಿಶೀಲಿಸಲು ಹಾಗೂ ವರದಿ ನೀಡಲು ಆಯೋಗವನ್ನು ರಚಿಸಿರುವುದರಿಂದ ನಿಯಮ 62ರ ಮೇರೆಗೆ ಚರ್ಚೆಗೆ ಅವಕಾಶವನ್ನು ನಿರಾಕರಿಸಲಾಗಿದೆ" ಎಂದು ನೀಡಿದ ತೀರ್ಪಿನ ಮೇರೆಗೆ ವಿರೋಧ ಪಕ್ಷದ ನಾಯಕರು ಗೌರವಾನ್ವಿತ ಪೀಠವು ನೀಡಿರುವ ತೀರ್ಪನ್ನು ಮರುಪರಿಶೀಲಿಸಬೇಕೆಂದು ವಿನಂತಿ ಮಾಡಿದ ಮೇರೆಗೆ ಪತ್ರವನ್ನು ನೀಡಿದ್ದಲ್ಲಿ ಪರಿಶೀಲಿಸಲಾಗುವುದೆಂದು ಪೀಠದಿಂದ ತಿಳಿಸಲಾಗಿರುತ್ತದೆ.

ಅದರಂತೆ ವಿರೋಧ ಪಕ್ಷದವರು ಕಳೆದ ವಾರ ವಾಲ್ಮೀಕಿ ಹಗರಣದ ಬಗ್ಗೆ ನೀಡಲಾದ ಸೂಚನೆಯ ಸಂಬಂಧ ಷರತ್ತಿಗೆ ಒಳಪಟ್ಟಂತೆ ಚರ್ಚಿಸಲು ನಿಯಮ 68ರ ಅಡಿಯಲ್ಲಿ ಅವಕಾಶ ನೀಡಬೇಕೆಂದು ಕೋರಿ ಪತ್ರ ನೀಡಿರುತ್ತಾರೆ.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ನಿಗಮಗಳಲ್ಲಿ 180 ಕೋಟಿ ರೂಪಾಯಿಗಳನ್ನು ಅಕ್ರಮವಾಗಿ ದುರುಪಯೋಗ ಮಾಡಿಕೊಳ್ಳಲಾಗಿದೆ ಎಂಬ ವಿಷಯವನ್ನು ನಿಲುವಳಿ ಸೂಚನೆಯ ಮೂಲಕ ಚರ್ಚಿಸಲು ದಿನಾಂಕ:15.07.2024ರಂದು ನೀಡಿದ ಸೂಚನೆಯ ಸಂಬಂಧದಲ್ಲಿ ಸದರಿ ವಿಷಯವು ನ್ಯಾಯಾಲಯದ ಇತ್ಯರ್ಥದಲ್ಲಿದ್ದು, ತೀರ್ಪು ನೀಡಿರದ ಯಾವುದೇ ಸಂಗತಿಯನ್ನು ಕುರಿತು ಮಾತನಾಡತಕ್ಕದ್ದಲ್ಲ ಮತ್ತು ಸದಸ್ಯರೊಬ್ಬರ ಮೇಲೆ ವೈಯಕ್ತಿಕ ದೋಷರೋಪಣೆ ಮಾಡತಕ್ಕದ್ದಲ್ಲ ಎಂಬ ಷರತ್ತಿನೊಂದಿಗೆ ನಿಯಮ 68ರ ಅಡಿಯಲ್ಲಿ ಚರ್ಚಿಸಲು ಅವಕಾಶ ನೀಡಲಾಗಿರುತ್ತದೆ.

ಆದರೆ, ಪ್ರಸ್ತುತ ನೀಡಿರುವ ಸೂಚನೆಯಲ್ಲಿನ ವಿಷಯವು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮ 61(3)ರನ್ವಯ ಇತ್ತೀಚೆಗೆ ನಡೆದ ನಿರ್ದಿಷ್ಟ ವಿಷಯವಾಗಿಲ್ಲವಾದ್ದರಿಂದ ಚರ್ಚೆಗೆ ಅವಕಾಶವನ್ನು ನಿರಾಕರಿಸಲಾಗಿದೆ.

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ. **ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರ ಪರವಾಗಿ ಶ್ರೀ ಎನ್.ಎಸ್. ಬೋಸ್‌ರಾಜು, ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು**

ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಸರಣಾ ಲೆಕ್ಕಪರಿಶೋಧನಾ ವರದಿ(2024ರ ವರದಿ ಸಂಖ್ಯೆ–3)ಯನ್ನು ಸಭೆಯ ಮುಂದೆ ಮಂಡಿಸಿದರು.

ಆ. **ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.**

1. ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2024
2. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ, 2024
3. ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024

ಇ. ಮಾನ್ಯ ಸಭಾನಾಯಕರು ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಮೂರು ಮತ್ತು ನಾಲ್ಕನೇ ಪಟ್ಟಿಗಳನ್ನು ಮಂಡಿಸಿದರು.

## 4. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **"ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ", 2024** ಅನ್ನು

ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

2. **"ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ(ಕ್ಷೇಮಾಭಿವೃದ್ಧಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ(ಕ್ಷೇಮಾಭಿವೃದ್ಧಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಕಾರ್ಮಿಕ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

3. **"ಕರ್ನಾಟಕ ಸರಕು ಮತ್ತು ಸೇವಾ ತೆರಿಗೆ (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಸರಕು ಮತ್ತು ಸೇವಾ ತೆರಿಗೆ(ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಭಾನಾಯಕರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

## 5. ಚುನಾವಣಾ ಪ್ರಸ್ತಾವ

2024–25ನೇ ಸಾಲಿನ ವಿಧಾನ ಮಂಡಲದ ಹಾಗೂ ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ, ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಹಾಗೂ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಮಾನ್ಯ ಸಭಾನಾಯಕರು ಪ್ರಸ್ತಾವ ಮಂಡಿಸಿದರು.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು.

**6. ವರದಿಗಳನ್ನೊಪ್ಪಿಸುವುದು**

ಅ. **ಶ್ರೀ ರಾಜೇಂದ್ರ ರಾಜಣ್ಣ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು 2023–24ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿಯನ್ನು ಒಪ್ಪಿಸಿದರು.

ಆ. **ಶ್ರೀ ಕೆ. ಅಬ್ದುಲ್ ಜಬ್ಬರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು 2023–24ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನು ಒಪ್ಪಿಸಿದರು.

**ಶಾಸನ ರಚನೆ**

4. **"ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ನೀರಾವರಿ(ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಉಪ ಮುಖ್ಯಮಂತ್ರಿಗಳು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**7. ನಿರ್ಣಯಗಳು**

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ನಿರ್ಣಯಗಳನ್ನು ಮಂಡಿಸಿದರು.**

ಅ. **"**ಕರ್ನಾಟಕ ವಿಧಾನ ಸಭೆಯು, 2026ರಲ್ಲಿನ ಅಥವಾ ಅದರ ನಂತರ ನಡೆಸುವ ಹೊಸ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್ ವಿಂಗಡಣಾ ಪ್ರಕ್ರಿಯೆಯನ್ನು ನಡೆಸಬಾರದೆಂದು ಜನಸಂಖ್ಯೆಯನ್ನು ಆಧರಿಸಿ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಸಂದರ್ಭದಲ್ಲಿ, ಪ್ರತಿ ರಾಜ್ಯಕ್ಕೆ ಹಂಚಿಕೆ ಮಾಡಬೇಕಾದ ಲೋಕಸಭಾ ಸ್ಥಾನಗಳ

ಸಂಖ್ಯೆಯನ್ನು ಮತ್ತು ಪ್ರತಿ ರಾಜ್ಯದ ವಿಧಾನ ಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿಯನ್ನಾಧರಿಸಿ ನಿರ್ಧರಿಸಬೇಕೆಂದು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ".

ನಿರ್ಣಯವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಆ. "ಭಾರತವು ವಿಶ್ವದ ಅತಿದೊಡ್ಡ ಒಕ್ಕೂಟ ಪ್ರಜಾಪ್ರಭುತ್ವವಾಗಿದೆ. ಭಾರತ ಸಂವಿಧಾನದ ಭಾಗ XVರಲ್ಲಿ ಪ್ರತಿಪಾದಿಸಿರುವ ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆಯ ತತ್ವವು ಈ ಪ್ರಜಾಪ್ರಭುತ್ವದ ಆತ್ಮವಾಗಿದೆ. 'ಒಂದು ರಾಷ್ಟ್ರ, ಒಂದು ಚುನಾವಣೆ' ಪ್ರಸ್ತಾವವು ಭಾರತದ ಪ್ರಜಾಸತ್ತಾತ್ಮಕ ಮತ್ತು ಒಕ್ಕೂಟ ವ್ಯವಸ್ಥೆಗೆ ಅಪಾಯವನ್ನುಂಟು ಮಾಡುತ್ತದೆ. ಬೇರೆ ಬೇರೆ ರಾಜ್ಯಗಳ ವಿಧಾನ ಸಭೆಗಳು ಅವುಗಳದ್ದೇ ಆದ ಅಧಿಕಾರ ಅವಧಿಗಳನ್ನು ಹೊಂದಿರುತ್ತವೆ ಮತ್ತು ಏಕರೂಪ ಚುನಾವಣಾ ವೇಳಾಪಟ್ಟಿಯು ರಾಷ್ಟ್ರೀಯ ವಿಷಯಗಳ ಮೇಲೆ ಹೆಚ್ಚಾಗಿ ಗಮನಹರಿಸುವ ಮತ್ತು ಸ್ಥಳೀಯ ಕಾಳಜಿಗಳನ್ನು ನಿರ್ಲಕ್ಷಿಸುವ ಮೂಲಕ ರಾಜ್ಯಗಳ ಸ್ವಾಯತ್ತತೆಯನ್ನು ದುರ್ಬಲಗೊಳಿಸಬಹುದು. ಸಾಕಷ್ಟು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು, ಚುನಾವಣಾ ಸಿಬ್ಬಂದಿಯನ್ನು ನಿರ್ವಹಿಸುವುದು, ಮತದಾರರ ಬೇಸರ, ಕಡಿಮೆಗೊಂಡ ಸರ್ಕಾರದ ಉತ್ತರದಾಯಿತ್ವ ಹಾಗೂ ಆರ್ಥಿಕ ಮತ್ತು ಸಾಮಾಜಿಕ ಅಡೆತಡೆಗಳು ಏಕಕಾಲಿಕ ಚುನಾವಣೆಗಳಿಗೆ ಸಂಬಂಧಿಸಿದ ಗುರುತರ ಗಂಡಾಂತರಗಳಾಗಿವೆ. ಹಾಗಾಗಿ ಭಾರತದ ಪ್ರಜಾಸತ್ತಾತ್ಮಕ ಪ್ರಕ್ರಿಯೆಗಳು ಮತ್ತು ಒಕ್ಕೂಟ ಸಮಗ್ರತೆಯನ್ನು ರಕ್ಷಿಸಲು ಈ ಕಠೋರ ನೀತಿಯನ್ನು ಅನುಷ್ಠಾನಗೊಳಿಸಬಾರದೆಂದು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ".

ನಿರ್ಣಯವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು) ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

ಇ. "ನೀಟ್ (NEET) ಪರೀಕ್ಷಾ ವ್ಯವಸ್ಥೆಯು, ಗ್ರಾಮೀಣ ಬಡ ಮಕ್ಕಳ ವೈದ್ಯಕೀಯ ಶಿಕ್ಷಣಾವಕಾಶಗಳ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು ಹಾಗೂ ಶಾಲಾ ಶಿಕ್ಷಣ ವ್ಯವಸ್ಥೆಯನ್ನು ನಿರರ್ಥಕಗೊಳಿಸುವುದು ಮಾತ್ರವಲ್ಲದೆ, ರಾಜ್ಯ ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ರಾಜ್ಯ ಸರ್ಕಾರದ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದು, ಅದನ್ನು ರದ್ದುಪಡಿಸಬೇಕೆಂದು ಕೋರಲಾಗಿದೆ.

ಈ ಪರೀಕ್ಷೆಯಿಂದ ಕರ್ನಾಟಕಕ್ಕೆ ವಿನಾಯಿತಿ ನೀಡಬೇಕೆಂದು ಹಾಗೂ ಶಾಲಾ ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ(ಸಿಇಟಿ) ಅಂಕಗಳನ್ನಾಧರಿಸಿ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶಾತಿ ನೀಡಬೇಕೆಂದು ಮತ್ತು ನೀಟ್ ಪರೀಕ್ಷೆಗಳಲ್ಲಿ ಆಗುತ್ತಿರುವ ಪುನರಾವರ್ತಿತ ಅಕ್ರಮಗಳನ್ನು ಪರಿಗಣಿಸಿ ರಾಷ್ಟ್ರೀಯ ಮಟ್ಟದಲ್ಲಿ ನೀಟ್ ವ್ಯವಸ್ಥೆಯನ್ನು ರದ್ದುಪಡಿಸುವ, ಹಾಗೆ ಕೇಂದ್ರ ಸರ್ಕಾರವು ರಾಷ್ಟ್ರೀಯ ವೈದ್ಯಕೀಯ ಆಯೋಗ ಅಧಿನಿಯಮ, 2019 (2019ರ ಕೇಂದ್ರ ಅಧಿನಿಯಮ 30)ರಲ್ಲಿ ಅಗತ್ಯ ತಿದ್ದುಪಡಿಗಳನ್ನೂ ಸಹ ಮಾಡುವಂತೆ ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ."

ನಿರ್ಣಯವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

"ಅರಣ್ಯವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳ ಮಾನ್ಯತೆ) ಅಧಿನಿಯಮ, 2006 (2007ರ ಕೇಂದ್ರ ಅಧಿನಿಯಮ

02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವಂತೆ ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ."

ನಿರ್ಣಯವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**ಶಾಸನ ರಚನೆ**

5. **"ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಉಪ ಮುಖ್ಯಮಂತ್ರಿಗಳು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

6. **"ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 12.20 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 3.25 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

ವಿಧೇಯಕಗಳನ್ನು ಚರ್ಚೆಗೆ ತೆಗೆದುಕೊಳ್ಳಲು ಅವಕಾಶ ನೀಡಿ ಎಂದು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮಾತನಾಡಿದರು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಧರಣಿ ನಿರತರಾಗಿದ್ದರು.

ಮಧ್ಯಾಹ್ನ 3.33 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

**8. ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಉಪ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:25.07.2024**ರಂದು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024ನ್ನು ಹಾಗೂ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ,2024
2. ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024

3. ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024

4. ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024

5 ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2024

**ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024ನ್ನು ಹಾಗೂ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.

01. ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024

02. ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024

03. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2024

04. ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024

05. ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2024

**ಶಾಸನ ರಚನೆ**

7. **"ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ(ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ(ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

8. **"ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ(ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ(ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

9. **"ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ", 2024** ಅನ್ನು

ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರ ಪರವಾಗಿ ಮಾನ್ಯ ಕಂದಾಯ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

10. **"ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

11. **"ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ) (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ) (ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

12. **"ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ **"ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ", 2024** ಅನ್ನು ಪರ್ಯಾಲೋಚಿಸಿ

ಅಂಗೀಕರಿಸಬೇಕೆಂದು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸೂಚಿಸಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

## 9. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಗೋವಿಂದರಾಜು** ಅವರು ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ವಿಶೇಷ ಚೇತನರಿಗಾಗಿ ನೀಡಲಾಗುವ ದ್ವಿಚಕ್ರವಾಹನಗಳನ್ನು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ನೋಂದಣಿ ಮಾಡಿಸಲು ಸಾಧ್ಯವಾಗದೇ ವಿತರಣೆಯಲ್ಲಿ ಆಗುತ್ತಿರುವ ವಿಳಂಬದ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಎನ್. ರವಿಕುಮಾರ್** ಅವರು ಸೇಡಂ ಪುರಸಭೆಯಲ್ಲಿ ಕಿರಿಯ ಇಂಜಿನಿಯರ್ ಆಗಿದ್ದ ಅಶೋಕ್ ಪುಟಪಾಕ್ ಅವರು ಆರು ತಿಂಗಳ ಹಿಂದೆ ಮೃತಪಟ್ಟಿದ್ದು, ನಗರಾಭಿವೃದ್ಧಿ ಇಲಾಖೆಯವರು ಸದರಿಯವರನ್ನು ಮಡಿಕೇರಿ ನಗರಸಭೆಗೆ ವರ್ಗಾವಣೆ ಮಾಡಿರುವುದಾಗಿ ಆದೇಶ ಹೊರಡಿಸಿರುವ ಕುರಿತು ದಿನಾಂಕ:16.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಸಿ.ಟಿ. ರವಿ** ಅವರು ಮುಖ್ಯ ಶಿಕ್ಷಕರ ಬಡ್ತಿ, ಪ್ರೌಢಶಾಲಾ ಶಿಕ್ಷಕರ ಬಡ್ತಿ, ಸೇವಾ ಜೇಷ್ಠತೆಯಂತಹ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವ ಕುರಿತು ದಿನಾಂಕ:18.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ 2ನೇ ಅತಿದೊಡ್ಡ ಅರೇಶಂಕರ ಕೆರೆಯ ಜೀರ್ಣೋದ್ದಾರದ ಅಭಿವೃದ್ಧಿಗೆ ಯೋಜನೆ

ರೂಪಿಸುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಕೆ.ಸ್. ನವೀನ್** ಅವರು ರಾಜ್ಯದಲ್ಲಿ ರೈತರಿಗೆ ಬೇಕಾದ ರಸಗೊಬ್ಬರ ಸರಿಯಾದ ಸಮಯದಲ್ಲಿ ಪೂರೈಕೆಯಾಗುತ್ತಿಲ್ಲದಿರುವ ಕುರಿತು ದಿನಾಂಕ:19.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಸಿ.ಟಿ. ರವಿ** ಅವರು ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆಯ ಅರ್ಚಕರಿಗೆ ವೇತನ ನಿಗದಿಪಡಿಸಿ ಪ್ರತಿ ತಿಂಗಳು ಕಾಲಮಿತಿಯೊಳಗೆ ವೇತನ ಪಾವತಿಸುವ ಕುರಿತು ದಿನಾಂಕ:22.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು 2022–23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ಕಾನೂನು ಪದವಿ ವಿದ್ಯಾರ್ಥಿಗಳ 2ನೇ ವರ್ಷದ ಪರೀಕ್ಷೆಯ ಫಲಿತಾಂಶ ಪ್ರಕಟಿಸದೆ ತಡೆಹಿಡಿದಿರುವುದರಿಂದ ಕೂಡಲೇ ಪ್ರಕಟಿಸುವ ಕುರಿತು ದಿನಾಂಕ:22.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀಮತಿ ಹೇಮಲತಾ ನಾಯಕ್** ಅವರು ಸಹಕಾರ ಮಾರಾಟ ಮಹಾಮಂಡಳ ನಿಯಮಿತ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನಿವೃತ್ತ ಅಧಿಕಾರಿ ಕೆ.ಎಂ. ಆಶಾ ಅವರನ್ನು ನೇಮಿಸಿರುವ ಕುರಿತು ದಿನಾಂಕ:23.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಶ್ರೀ ಡಿ.ಎಸ್. ಅರುಣ್** ಅವರು ಸರ್ಕಾರದ ನಿರ್ಲಕ್ಷ್ಯಕ್ಕೆ ಒಳಗಾಗಿರುವ ರೇಷ್ಮೆ ಇಲಾಖೆಗೆ ಮರುಜೀವ ನೀಡುವ ಕುರಿತು ದಿನಾಂಕ:23.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

10. **ಶ್ರೀ ಪಿ.ಹೆಚ್. ಪೂಜಾರ್** ಅವರು ಪತ್ರಿಕೋದ್ಯಮ ವಿಷಯದಲ್ಲಿ ಖಾಯಂ ಆಗಿ ಸ್ನಾತಕೋತ್ತರ ಪದವಿ ಪಡೆದು ಸ್ಥಳೀಯ ಜಿಲ್ಲಾ ಮಟ್ಟದ ಕನ್ನಡ ದಿನಪತ್ರಿಕೆ ಆರಂಭಿಸಿರುವ ಸಂಪಾದಕರಿಗೆ ಪ್ರತಿ ತಿಂಗಳು ಎರಡು ಪುಟ ಜಾಹೀರಾತು ವ್ಯವಸ್ಥೆ ಮಾಡುವ ಕುರಿತು ದಿನಾಂಕ:23.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

11. **ಶ್ರೀ ಎನ್. ರವಿಕುಮಾರ್** ಅವರು ರಾಯಚೂರು ಜಿಲ್ಲೆಯಲ್ಲಿ ದರ್ವೇಶ್ ಗ್ರೂಪ್ ಆಫ್ ಕಂಪನಿ ಎಂಬ ಸಂಸ್ಥೆಯು ಹೂಡಿಕೆದಾರರಿಗೆ ಅಧಿಕ ಬಡ್ಡಿ ನೀಡುವುದಾಗಿ ಹೇಳಿ ಅವರಿಂದ ಡಿಪಾಸಿಟ್ ರೂಪದಲ್ಲಿ ಹಣ ಪಡೆದು ವಂಚಿಸಿರುವ ಕುರಿತು ದಿನಾಂಕ:23.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

12. **ಶ್ರೀ ಪುಟ್ಟಣ್ಣ** ಅವರು 2024–25ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರುತಿಸಿ ತಾತ್ಕಾಲಿಕ ಪಟ್ಟಿ ಹೊರಡಿಸಿರುವ ಆದೇಶವನ್ನು ರದ್ದುಪಡಿಸುವ ಕುರಿತು ದಿನಾಂಕ:24.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

13. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ/ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಆಸುಪಾಸಿನ ಅಡಿಕೆ ಕೃಷಿಕರಿಗೆ ಕೊಳೆರೋಗ ಭೀತಿ ಎದುರಾಗಿರುವ ಕುರಿತು ದಿನಾಂಕ:24.07.2024ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

ದಿನಾಂಕ:25.07.2024ರ ಚುಕ್ಕೆ ಗುರುತಿನ 15 ಪ್ರಶೆಗಳ ಪೈಕಿ 112 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 118 ಪ್ರಶ್ನೆಗಳ ಪೈಕಿ 41 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

**ಸಾರಾಂಶ**

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ 153ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:15.07.2024 ರಿಂದ 25.07.2024 ರವರೆಗೆ ಒಟ್ಟು 08 ದಿನಗಳು ಅಂದರೆ, 37 ಗಂಟೆಗಳು 30 ನಿಮಿಷ ನಡೆಸಲಾಗಿರುತ್ತದೆ.

ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಸಂವಿಧಾನದ ಪೀಠಿಕೆಯನ್ನು ಎಲ್ಲಾ ಮಾನ್ಯ ಶಾಸಕರುಗಳು ಓದಬೇಕೆಂದು ನಿರ್ಣಯಿಸಲಾಗಿರುವ ರೀತ್ಯಾ, ಪ್ರಸ್ತುತ ಅಧಿವೇಶನದ ಮೊದಲ ದಿನದ ಉಪವೇಶನದಲ್ಲಿ ಎಲ್ಲಾ ಮಾನ್ಯ ಶಾಸಕರುಗಳಿಂದ ಸಂವಿಧಾನದ ಪೀಠಿಕೆಯನ್ನು ಪಠಣ ಮಾಡಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 15 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

World T-20ಯಲ್ಲಿ ವಿಜೇತರಾದ ಭಾರತೀಯ ಕ್ರಿಕೆಟ್ ತಂಡಕ್ಕೆ ಗೌರವ ಸಮರ್ಪಿಸಲು ಅಭಿನಂದನಾ ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ಮಾನ್ಯತೆ ನೀಡಲಾಯಿತು.

2024-25ನೇ ಸಾಲಿನ ಪೂರಕ ಅಂದಾಜು (ಮೊದಲನೇ ಕಂತು) ಗಳ ಬೇಡಿಕೆಗಳನ್ನು ಹಾಗೂ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03 ಹಾಗೂ 04ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ

ಲೆಕ್ಕಪರಿಶೋಧನಾ ವರದಿ (2024ರ ವರದಿ ಸಂಖ್ಯೆ:1), ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016ರ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ (2024ರ ವರದಿ ಸಂಖ್ಯೆ:2), ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖ ನೀಡಿರುವ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಾಹಣಾ ಲೆಕ್ಕಪರಿಶೋಧನಾ ವರದಿಯನ್ನು (2024ರ ವರದಿ ಸಂಖ್ಯೆ:2), ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಸರಣಾ ಲೆಕ್ಕಪರಿಶೋಧನಾ ವರದಿ (2024ರ ವರದಿ ಸಂಖ್ಯೆ:3) ಗಳನ್ನು ಮಂಡಿಸಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿ, ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ ಮೂವತ್ತೊಂಭತ್ತನೇ ವರದಿ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೆಯ ವರದಿಗಳನ್ನು ಒಪ್ಪಿಸಲಾಯಿತು.

ವಿಧಾನ ಮಂಡಲದ ಜಂಟಿ/ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್, ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿ ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ

ಪ್ರಸ್ತಾವವನ್ನು ಸದನದಲ್ಲಿ ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:19.06.2024ರಿಂದ 02 ತಿಂಗಳುಗಳು ಹಾಗೂ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2024 ರಿಂದ 06 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವನೆಗಳಿಗೆ ಸದನದ ಸಹಮತಿಯನ್ನು ಪಡೆಯಲಾಯಿತು.

ನಾಲ್ಕು ಅಧಿಕೃತ ನಿರ್ಣಯಗಳನ್ನು ಸದನದಲ್ಲಿ ಮಂಡಿಸಿ ಅಂಗೀಕರಿಸಲಾಗಿರುತ್ತದೆ.

ನಿಯಮ 59 ರಡಿಯಲ್ಲಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ನಿಯಮ 68ಕ್ಕೆ, 01 ನಿಯಮ 72ಕ್ಕೆ ಪರಿವರ್ತನೆಗೊಂಡು ಸದನದಲ್ಲಿ ಉತ್ತರಿಸಲಾಗಿರುತ್ತದೆ ಹಾಗೂ 02 ನಿಯಮ 330ಕ್ಕೆ ಪರಿವರ್ತಿಸಲಾಗಿದೆ. 01 ತಿರಸ್ಕೃತಗೊಂಡಿರುತ್ತದೆ.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1251 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 135 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 90 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 16 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ

ಒಟ್ಟು 1116 ಪ್ರಶ್ನೆಗಳ ಪೈಕಿ 348 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 08 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. 3 ಸೂಚನೆಗಳನ್ನು ಚರ್ಚಿಸಲಾಗಿರುತ್ತದೆ.

ನಿಯಮ 72ರಡಿಯಲ್ಲಿ 126 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 08 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 49 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 87 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 05 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 31 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 62 ಸೂಚನೆಗಳ ಪೈಕಿ 39 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ಪರಿಶೀಲನಾ ಸಮಿತಿಗೆ ವಹಿಸಲಾಗಿದ್ದ ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಹಾಗೂ ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2 ವಿಧೇಯಕಗಳು ಹಾಗೂ ತಿದ್ದುಪಡಿಯಿಲ್ಲದೆ ಅಂಗೀಕೃತ ರೂಪದಲ್ಲಿರುವ ಒಟ್ಟು 10 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ

ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಮಧ್ಯಾಹ್ನ 4.20 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) **ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು.**

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ.356/ಪಿ5